ವಿಜಯಪುರ | ಸಂಪುಟ 04 | ಸಂಚಿಕೆ 069 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಮೇ, 01, 2026

"ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರದ ಕಿತ್ತಾಟ ಜೋರಾಗಿ ನಡೆದಿದ್ದು, ಡಿ.ಕೆ.ಶಿವಕುಮಾರ ಸಿಎಂ ಆಗಲು ಶಾಲು ಹೊತ್ತುಕೊಂಡು ಕೂತಿದ್ದಾರೆ, ಸಿದ್ದರಾಮಯ್ಯ ಇನ್ನು ಕೇವಲ 15 ದಿನಗಳ ಸರದಾರ ಮಾತ್ರ. ಪಂಚರಾಜ್ಯಗಳ ಚುನಾವಣಾ ಫಲಿತಾಂಶದ ದಿನವೇ ಅವರ ಕುರ್ಚಿ ಫಲಿತಾಂಶ ಪ್ರಕಟವಾಗಲಿದೆ."



■ ಗೋವಿಂದ ಕಾರಜೋಳ

ಮಾಜಿ ಉಪ ಮುಖ್ಯಮಂತ್ರಿ ಹಾಗೂ ಸಂಸದರು

# ರಾಷ್ಟ್ರ ನಿರ್ಮಾಣದಲ್ಲಿ ಯುವಜನತೆ ಕೊಡುಗೆ ಅವಶ್ಯ :ಡಾ.ಮಿರ್ಧೆ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಷ್ಟ್ರ ನಿರ್ಮಾಣದಲ್ಲಿ ಯುವಜನರ ಕೊಡುಗೆ ಅವಶ್ಯಕ. ಆ ನಿಟ್ಟಿನಲ್ಲಿ ಇಂತಹ ಎನ್ ಎಸ್ ಎಸ್ ಶಿಬಿರದಲ್ಲಿ ಭಾಗವಹಿಸಿ ಉತ್ತಮ ಸಮಾಜ ನಿರ್ಮಾಣ ಮಾಡಲು ಮುಂದಾಗಬೇಕು ಎಂದು ನಿವೃತ್ತ ಪ್ರಾಚಾರ್ಯೆ ಡಾ. ಆರ್.ಎಂ. ಮಿರ್ಧೆ ಹೇಳಿದರು.

ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ. ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯ ಹಾಗೂ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಬೆಳಗಾವಿ, ರಾಷ್ಟ್ರೀಯ ಸೇವಾ ಯೋಜನೆ ಘಟಕ 1 ಮತ್ತು 2 ರ ಸಹಯೋಗದಲ್ಲಿ ಏ.27 ರಂದು ದತ್ತು ಗ್ರಾಮ ಅರಕೇರಿ ಸರ್ಕಾರಿ ಪ್ರೌಢಶಾಲೆಯಲ್ಲಿ ಎನ್ ಎಸ್ ಎಸ್ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಸಾಮಾಜಿಕ ಜವಾಬ್ದಾರಿ, ನಿಸ್ವಾರ್ಥ ಸೇವೆ ಮನೋಭಾವ ಅದು ಎನ್ ಎಸ್ ಎಸ್, ಇಂತಹ ಶಿಬಿರದಲ್ಲಿ ಸಕ್ರೀಯವಾಗಿ ಪಾಲ್ಗೊಂಡು ನಿಮ್ಮ ವ್ಯಕ್ತಿತ್ವ,ಸ್ವಯಂ ಸೇವಾ ಮನೋಭಾವ ವಿಕಸನ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಈ ವೇಳೆ ಅರಕೇರಿಯ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎ.ಜಿ. ಮುಲ್ಲಾ ಮಾತನಾಡಿ, ಎನ್ ಎಸ್ ಎಸ್ ಶಿಬಿರದಾದ್ಯಂತ ಸ್ವಯಂ ಸೇವಕರ ಶಿಸ್ತು, ಸಾಮಾಜಿಕ ಜವಾಬ್ದಾರಿಗಳು ಮತ್ತು ಸಕ್ರಿಯ ಭಾಗವಹಿಸುವಿಕೆ ಅಲ್ಲದೆ ಅವರ ಪ್ರಾಮಾಣಿಕ ಪ್ರಯತ್ನಗಳು ಮತ್ತು ಸಮರ್ಪಣಾ ಮನೋಭಾವವನ್ನು ಶ್ಲಾಘಿಸಿದರು.

ಹಿಂದಿ ವಿಭಾಗದ ಮುಖ್ಯಸ್ಥೆ ಡಾ. ಮೀನಾಕ್ಷಿ ಬಿ. ಪಾಟೀಲ ಮಾತನಾಡಿ, ನಿಜವಾದ ಸ್ವಯಂ ಸೇವಾ ಮನೋಭಾವ ಎಂದರೆ ಅದು ರಾಷ್ಟ್ರೀಯ ಸೇವಾ ಯೋಜನೆ, ಅಂತಹ ಶಿಬಿರದಲ್ಲಿ ಸ್ವಯಂ ಸೇವಕರು ನಿಸ್ವಾರ್ಥ ಸೇವೆಯ ಕಾರ್ಯನಿರ್ವಹಿಸಿದ್ದೀರಿ. ಶಿಬಿರದ ಸಮಯದಲ್ಲಿನ ಸೇವಾ ಮನೋಭಾವ, ನಾಯಕತ್ವ ಗುಣ ಮತ್ತು ಸಹಾನುಭೂತಿಯ ಮೌಲ್ಯವನ್ನು ಎಂದೆಂದಿಗೂ ಹಸಿರಾಗಿರುವಂತೆ ಪ್ರೇರೇಪಿಸಿದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಘಟಕ ಆಯೋಜಿಸಿ 7 ದಿನಗಳ ಸಂಪೂರ್ಣ ವರದಿವಾಚನ ಮಾಡಲಾಯಿತು.

ಶಿಬಿರದಲ್ಲಿ ಉತ್ತಮ ಕಾರ್ಯಕ್ಷಮತೆ ತೋರಿಸಿದ ಸ್ವಯಂಸೇವಕರನ್ನು ಟ್ರೋಫಿ ಮತ್ತು ಪ್ರಶಸ್ತಿ ವಿತರಣೆ ಕಾರ್ಯಕ್ರಮ ಆಯೋಜಿಸಲಾಯಿತು.

ಅದೇ ರೀತಿಯಾಗಿ ವಿದ್ಯಾರ್ಥಿಗಳು ಶಿಬಿರದ ತಮ್ಮ ಅನುಭವಗಳನ್ನು ಹಂಚಿಕೊಂಡರು.

ಈ ಸಂದರ್ಭದಲ್ಲಿ ಎನ್‌ಎಸ್‌ಎಸ್ ಘಟಕ-1 ಮತ್ತು 2 ರ ಕಾರ್ಯಕ್ರಮ ಅಧಿಕಾರಿಗಳಾದ ಡಾ.ಮಿಲನ್ ರಾಠೋಡ್, ಡಾ.ತರನ್ನುಮ್ ಜಬೀನ್ ಖಾನ್, ಡಾ. ಕೆ. ಮಹೇಶ್ ಕುಮಾರ್, ಮಹಾವಿದ್ಯಾಲಯದ ಬೋಧಕ ಸಿಬ್ಬಂದಿ , ಸ್ವಯಂಸೇವಕ ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಕಾಂಪೌಂಡ್ ದುರಂತ: ಲೋಕಾಯುಕ್ತರಿಂದ ಸುಮೊಟು ಕೇಸ್ ದಾಖಲು!

## ಬೌರಿಂಗ್ ಆಸ್ಪತ್ರೆ ದುರಂತ ಸ್ಥಳಕ್ಕೆ ಲೋಕಾಯುಕ್ತ ನ್ಯಾಯಮೂರ್ತಿ ಬಿಎಸ್ ಪಾಟೀಲ್ ಭೇಟಿ | ಆಡಳಿತ ವ್ಯವಸ್ಥೆಯ ನಿರ್ಲಕ್ಷ್ಯದ ಬಗ್ಗೆ ತೀವ್ರ ಆಕ್ರೋಶ | ಹಿರಿಯ ಅಧಿಕಾರಿಗಳಿಗೆ ಶಾಕ್?

ಬೆಂಗಳೂರು: ನಗರದಲ್ಲಿ ಬುಧವಾರ ಸಂಭವಿಸಿದ ತೀವ್ರ ಗಾಳಿ ಮಳೆಗೆ ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಕುಸಿದು ಏಳು ಅಮಾಯಕರು ಬಲಿಯಾದ ಪ್ರಕರಣವನ್ನು ಕರ್ನಾಟಕ ಲೋಕಾಯುಕ್ತವು ಅತ್ಯಂತ ಗಂಭೀರವಾಗಿ ತೆಗೆದುಕೊಂಡಿದೆ.

ಘಟನಾ ಸ್ಥಳಕ್ಕೆ ಗುರುವಾರ ಭೇಟಿ ನೀಡಿ ಪರಿಶೀಲನೆ ನಡೆಸಿದ ಲೋಕಾಯುಕ್ತ ನ್ಯಾಯಮೂರ್ತಿ ಬಿಎಸ್ ಪಾಟೀಲ್, ಆಡಳಿತ ವ್ಯವಸ್ಥೆಯ ನಿರ್ಲಕ್ಷ್ಯದ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಘಟನೆಗೆ ಸಂಬಂಧಿಸಿದಂತೆ ಸ್ವಯಂಪ್ರೇರಿತ (ಖಣಂ ಒಂಣಣ ಅಚಿಜ) ಪ್ರಕರಣ ದಾಖಲಿಸುವುದಾಗಿ ಘೋಷಿಸಿದ್ದಾರೆ.





ಗುರುವಾರ ಕಂಪೌಂಡ್ ಕುಸಿದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ನ್ಯಾಯಮೂರ್ತಿ ಬಿಎಸ್ ಪಾಟೀಲ್, ಕಾಂಪೌಂಡ್‌ನ ಅಡಿಪಾಯ ಅತ್ಯಂತ ದುರ್ಬಲವಾಗಿದ್ದೇ ಈ ದುರಂತಕ್ಕೆ ಪ್ರಮುಖ ಕಾರಣ. ನಗರದಲ್ಲಿ ಪ್ರತಿ ವರ್ಷ ಮಳೆ ಬರುತ್ತದೆ ಎಂಬುದು ಗೊತ್ತಿದ್ದರೂ, ಇಂತಹ ದುರ್ಬಲ ಗೋಡೆಗಳ ಪಕ್ಕದಲ್ಲಿ ಬೀದಿ ಬದಿ ವ್ಯಾಪಾರಿಗಳಿಗೆ ಅವಕಾಶ ನೀಡಿರುವುದು ಅಧಿಕಾರಿಗಳ ಬೇಜವಾಬ್ದಾರಿ ತೋರಿಸುತ್ತದೆ ಎಂದು ಬೇಸರ ವ್ಯಕ್ತಪಡಿಸಿದರು.

ಕೇವಲ ಒಂದು ಗಂಟೆ ಮಳೆ ಬಂದಿದ್ದಕ್ಕೆ ಗೋಡೆ ಕುಸಿಯುತ್ತಿದೆ ಎಂದರೆ ಕಾಮಗಾರಿಯ ಗುಣಮಟ್ಟ ಎಷ್ಟಿರಬಹುದು ಯೋಚಿಸಿ ಎಂದರು.

ಈ ಪ್ರಕರಣದಲ್ಲಿ ಕೆಳಹಂತದ ಸಿಬ್ಬಂದಿಯನ್ನಷ್ಟೇ ಅಲ್ಲದೆ, ಉನ್ನತ ಮಟ್ಟದ ಅಧಿಕಾರಿಗಳನ್ನೂ ಹೊಣೆಗಾರರನ್ನಾಗಿ ಮಾಡಬೇಕು. ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ರಾಜ್ಯ ಸರ್ಕಾರದ ಮುಖ್ಯಕಾರ್ಯದರ್ಶಿ ಸೇರಿದಂತೆ ಪ್ರಮುಖ ಅಧಿಕಾರಿಗಳನ್ನು ಆರೋಪಿಗಳನ್ನಾಗಿ ಮಾಡಲಾಗುವುದು ಎಂದು ತಿಳಿಸಿದರು.

### ಹಿರಿಯ ಅಧಿಕಾರಿಗಳ ವಿರುದ್ಧ ಕೇಸು ಸಾಧ್ಯತೆ

ಬೌರಿಂಗ್ ಪ್ರಕರಣದಲ್ಲಿ ಕೇವಲ ಕೆಳ ಹಂತದ ಅಧಿಕಾರಿಗಳ ಮೇಲೆ ಮಾತ್ರವಲ್ಲದೆ ಉನ್ನತ ಮಟ್ಟದ ಅಧಿಕಾರಿಗಳ ವಿರುದ್ಧ ಕೂಡ ಕೇಸು ದಾಖಲಿಸುವ ಸಾಧ್ಯತೆಯಿದೆ. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ವೈದ್ಯಕೀಯ ಶಿಕ್ಷಣ ಇಲಾಖೆ ಆಯುಕ್ತ, ಅಪರ ಕಾರ್ಯದರ್ಶಿ, 5 ಪಾಲಿಕೆಗಳ ವಲಯ ಆಯುಕ್ತರ ವಿರುದ್ಧ ಕೂಡ ಕೇಸು ದಾಖಲಾಗುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.

### ಘಟನೆ ವಿವರ

ನಗರದಲ್ಲಿ ಬುಧವಾರ ಸಂಜೆ ಸುರಿದ ಭಾರೀ ಮಳೆ ಮತ್ತು ಬಿರುಗಾಳಿಗೆ ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಕುಸಿದುಬಿದ್ದು ಘೋರ ದುರಂತ ಸಂಭವಿಸಿತ್ತು.

ಘಟನೆಯಲ್ಲಿ 6 ವರ್ಷದ ಮಗು ಸೇರಿ ಒಟ್ಟು 7 ಮಂದಿ ದಾರುಣ ಸಾವನ್ನಪ್ಪಿದ್ದು, ಮೃತಪಟ್ಟವರ ಅಧಿಕೃತ ಮಾಹಿತಿಯನ್ನು ಸರ್ಕಾರ ಬಿಡುಗಡೆ ಮಾಡಿತ್ತು.

ದುರ್ಘಟನೆಯಲ್ಲಿ ಬೆಂಗಳೂರು ಮೂಲದವರು ಮಾತ್ರವಲ್ಲದೆ, ಕೇರಳದ ಪ್ರವಾಸಿಗರು ಹಾಗೂ ಅಂತರರಾಜ್ಯ ಕಾರ್ಮಿಕರು ದಾರುಣ ಸಾವನ್ನಪ್ಪಿದ್ದರು.



# ಕಾಲುವೆ ಸೇತುವೆಗೆ ತಡೆಗೋಡೆ ನಿರ್ಮಾಣಕ್ಕೆ ಗ್ರಾಮಸ್ಥರ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ಚಿಮ್ಮಡ: ಗ್ರಾಮದಿಂದ ಶ್ರೀ ಪ್ರಭುಲಿಂಗೇಶ್ವರ ದೇವಸ್ಥಾನಕ್ಕೆ ತೆರಳುವ ಮಾರ್ಗದಲ್ಲಿ ಹರಿಯುವ ಘಟಪ್ರಭಾ ಎಡದಂಡೆ ಕಾಲುವೆಯ ಜಮಖಂಡಿ ಉಪ ಕಾಲುವೆಯ ಸೇತುವೆಗೆ ತಡೆಗೋಡೆ ನಿರ್ಮಿಸಬೇಕೆಂದು ಈ ಭಾಗದ ರೈತರು, ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಗ್ರಾಮದಿಂದ ಜಗದಾಳ, ಕುಳಲಿ ಮಾರ್ಗದ ಈ ರಸ್ತೆಯು 2020-21 ನೇ ಸಾಲಿನ ಅಪೆಂಡಿಕ್ಸ -ಇ ಯೋಜನೆಯಡಿಯಲ್ಲಿ ಸುಮಾರು 6 ಕೋಟಿ ರೂ.ಗಳ ವೆಚ್ಚದಲ್ಲಿ ದ್ವಿಪಥ ಮಾರ್ಗವಾಗಿ ಕಳೆದ ಎರಡು ವರ್ಷಗಳ ಹಿಂದೆ ಅಭಿವೃದ್ಧಿ ಪಡಿಸಲಾಗಿದ್ದು, ಈ ರಸ್ತೆಯನ್ನು ಎತ್ತರಿಸಿದ ಕಾರಣ ಸೇತುವೆಯ ತಡೆಗೋಡೆ ಸಂಪೂರ್ಣವಾಗಿ ಮುಚ್ಚಿಕೊಂಡಿದ್ದರಿಂದ ಈ ರಸ್ತೆಯಲ್ಲಿ ಸಂಚರಿಸುವ ವಾಹನ. ಜನ ಜಾನುವಾರುಗಳು ಕಾಲುವೆಗೆ ಬೀಳುವ ಅಪಾಯ ಹೆಚ್ಚಿದ್ದು, ಪ್ರತಿದಿನ ಶಾಲಾ ವಾಹನಗಳು ಹಾಗೂ ಗುಡ್ಡದ ಶ್ರೀ ಪ್ರಭುಲಿಂಗೇಶ್ವರ ದೇವಸ್ಥಾನಕ್ಕೆ ಮತ್ತು ಈ ಭಾಗದ ರೈತರು ತಮ್ಮ ಹೊಲ ಗದ್ದೆಗಳಿಗೆ ತೆರಳುವ ಏಕೈಕ ಮಾರ್ಗ ಇದಾಗಿದ್ದರಿಂದ ರಾತ್ರಿವೇಳೆ ಸಂಚರಿಸುವಾಗ ಸೇತುವೆ ಕಾಣದೆ ವಾಹನಗಳು ಕಾಲುವೆಗೆ ಬೀಳುವ ಅಪಾಯವಿದ್ದು, ಅನಾಹುತ ಸಂಭವಿಸುವ ಮುನ್ನ ಈ ಸೇತುವೆಗೆ ತಡೆಗೋಡೆ ನಿರ್ಮಿಸಿ ಈ ಮಾರ್ಗದ ಸಂಚಾರಿಗಳಿಗೆ ಅನುಕೂಲ ಕಲ್ಪಿಸಬೇಕೆಂದು ಈ ಭಾಗದ ನಾಗರಿಕರು ಸಂಬಂಧಿಸಿದ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

# ನೀಟ್ ಪರೀಕ್ಷಾ ಕೇಂದ್ರದಲ್ಲಿ ಮೂಲಸೌಲಭ್ಯಗಳ ಕೊರತೆ ಆರೋಪ



■ ಉದಯರಶ್ಮಿ ದಿನಪತ್ರಿಕೆ

## ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡುತ್ತಿರುವ ಜಿಲ್ಲಾಡಳಿತ | ಜಿಲ್ಲಾಧ್ಯಕ್ಷ ಭೋಗೇಶ್ ಸೋಲಾಪುರ್ ಆಕ್ರೋಶ | ಆಮ್ ಆದ್ಮಿ ಪಾರ್ಟಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ

ವಿಜಯಪುರ: ನಗರದ ಗಾಂಧಿ ಚೌಕ್‌ನಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಮೇ 3 ರಂದು ನಡೆಯಲಿರುವ ನೀಟ್ (ಓಇಇಖ) ಪರೀಕ್ಷಾ ಕೇಂದ್ರದಲ್ಲಿ ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ತೀವ್ರ ಕಳವಳಕ್ಕೆ ಕಾರಣವಾಗಿದೆ ಎಂದು ಆಮ್ ಆದ್ಮಿ ಪಾರ್ಟಿ ವಿಜಯಪುರ ಜಿಲ್ಲಾಧ್ಯಕ್ಷ ಭೋಗೇಶ್ ಸೋಲಾಪುರ್ ಆಕ್ರೋಶ ವ್ಯಕ್ತಪಡಿಸಿದರು.

ವಿಜಯಪುರದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪರೀಕ್ಷಾ ಕೊಠಡಿಗಳಲ್ಲಿ ಸಾಕಷ್ಟು ಫ್ಯಾನ್‌ಗಳ ವ್ಯವಸ್ಥೆ ಇಲ್ಲದಿರುವುದು, ನಿರಂತರ ವಿದ್ಯುತ್ ಪೂರೈಕೆಯ ಕೊರತೆ ಇರುವುದು ಮತ್ತು ಬೇಸಿಗೆಯ ತೀವ್ರ ಬಿಸಿಲಿನಲ್ಲಿ (40-42 ಡಿಗ್ರಿ ಸೆಲ್ಸಿಯಸ್) ವಿದ್ಯಾರ್ಥಿಗಳು ಪರೀಕ್ಷೆ ಬರೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಬಹುತೇಕ ಪರೀಕ್ಷಾ ಕೊಠಡಿಗಳಲ್ಲಿ ಫ್ಯಾನ್ ಇದ್ರೆ ವಿದ್ಯುತ್ ಇಲ್ಲ, ವಿದ್ಯುತ್ ಇದ್ರೆ ಫ್ಯಾನ್ ಇಲ್ಲ.. ಕೆಲವೊಂದು ಕೊಠಡಿಗಳಲ್ಲಿ ವಿದ್ಯುತ್ ಹಾಗೂ ಫ್ಯಾನ್ ಪಾಯಿಂಟ್ ಗಳೇ ಇಲ್ಲ.

ಇದರಿಂದ ವಿದ್ಯಾರ್ಥಿಗಳ ಆರೋಗ್ಯಕ್ಕೆ ಧಕ್ಕೆ ಉಂಟಾಗುವ ಸಾಧ್ಯತೆ ಹೆಚ್ಚಿದೆ ಹಾಗೂ ಪರೀಕ್ಷೆಯಲ್ಲಿ ಏಕಾಗ್ರತೆ ಕಾಯ್ದುಕೊಳ್ಳುವುದು ಅಸಾಧ್ಯವಾಗುತ್ತದೆ ಎಂದು ಭೋಗೇಶ್ ಸೋಲಾಪುರ್ ಹೇಳಿದರು.

ಆಮ್ ಆದ್ಮಿ ಪಾರ್ಟಿ ವಿದ್ಯಾರ್ಥಿಗಳ ಹಿತಕ್ಕಾಗಿ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣದ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಆಡಳಿತ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕರಿಗೆ ಒತ್ತಾಯಿಸುತ್ತಿದರು.



"ನೀಟ್ ಪರೀಕ್ಷೆಯು ವಿದ್ಯಾರ್ಥಿಗಳ ಭವಿಷ್ಯ ನಿರ್ಧಾರಕ ಪರೀಕ್ಷೆ. ಇಂತಹ ಮುಖ್ಯ ಪರೀಕ್ಷೆಯ ಸಮಯದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯಿಂದ ವಿದ್ಯಾರ್ಥಿಗಳು ಕಷ್ಟಪಡುತ್ತಿದ್ದರೆ ಅದು ಸರ್ಕಾರದ ವೈಫಲ್ಯವಾಗುತ್ತದೆ ಹಾಗೂ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಜಿಲ್ಲಾಡಳಿತ ಚೆಲ್ಲಾಟ ಆಡುತ್ತಿದೆ. ತಕ್ಷಣ ಕ್ರಮ ಕೈಗೊಂಡು ವಿದ್ಯಾರ್ಥಿಗಳಿಗೆ ಸುರಕ್ಷಿತ ಮತ್ತು ಅನುಕೂಲಕರ ವಾತಾವರಣವನ್ನು ಒದಗಿಸಬೇಕು."

■ ಭೋಗೇಶ್ ಸೋಲಾಪುರ್

ಆಮ್ ಆದ್ಮಿ ಪಾರ್ಟಿ ವಿಜಯಪುರ ಜಿಲ್ಲಾಧ್ಯಕ್ಷರು

# ಜನಿವಾರ ತೆಗೆಸಿದ ಘಟನೆ ಖಂಡಿಸಿ ಸಿಎಂಗೆ ಬ್ರಾಹ್ಮಣ ಮಹಾಸಭಾ ಮನವಿ

## ವಿಜಯಪುರದಲ್ಲಿ ಬ್ರಾಹ್ಮಣ ಸಮಾಜದಿಂದ ಪ್ರತಿಭಟನೆ | ಈ ಪ್ರಕರಣವನ್ನು ಎಸ್.ಐ.ಟಿ. ತಂಡ ರಚಿಸಿ ತನಿಖೆ ನಡೆಸಬೇಕೆಂದು ಒತ್ತಾಯ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕಳೆದ 23/24. ಏಪ್ರಿಲ್ ರಂದು ನಡೆದ ಸಿಇಟಿ ಪರೀಕ್ಷೆಯಲ್ಲಿ ಬೆಂಗಳೂರಿನ ಮಡಿವಾಳದ ಕೃಪಾನಿಧಿ. ಕಾಲೇಜಿನಲ್ಲಿ ಪರೀಕ್ಷೆಗೆ ಹಾಜರಿದ್ದ ಬ್ರಾಹ್ಮಣ ವಿದ್ಯಾರ್ಥಿಯ ಜನಿವಾರವನ್ನು ಕಾಲೇಜಿನ ಆಡಳಿತ ಮಂಡಳಿ ತೆಗೆಸಿದ್ದನ್ನು ಖಂಡಿಸಿ ಈ ಪ್ರಕರಣವನ್ನು ಎಸ್.ಐ.ಟಿ. ತಂಡ ರಚಿಸಿ ತನಿಖೆ ನಡೆಸಬೇಕೆಂದು ಅಖಿಲ ಭಾರತೀಯ ಬ್ರಾಹ್ಮಣ ಮಹಾಸಭಾ ವಿಜಯಪುರ ಜಿಲ್ಲಾ ಘಟಕದಿಂದ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಅಖಿಲ ಭಾರತೀಯ ಬ್ರಾಹ್ಮಣ ಮಹಾಸಭಾದ ಜಿಲ್ಲಾಧ್ಯಕ್ಷ ಮುಕುಂದ ಕುಲಕರ್ಣಿ ಮಾತನಾಡಿ, ಜನಿವಾರ ಧರಿಸುವುದು ಬ್ರಾಹ್ಮಣ ಸಮಾಜದ ಸಾಂಪ್ರದಾಯಿಕ ಗುರುತು. ಜನಿವಾರ ನಮ್ಮ ಸಮಾಜದ ಹೆಮ್ಮೆ. ನಮ್ಮ ಸಮಾಜದ ಗರ್ವದ ಪ್ರತೀಕವಾದ ಜನಿವಾರವನ್ನು ತೆಗೆಸಿದ್ದು ಆಘಾತಕಾರಿ. ಜನಿವಾರದಿಂದ ಯಾವ ರೀತಿಯಾಗಿ ಪರೀಕ್ಷೆಯಲ್ಲಿ ನಕಲು ಮಾಡಲು ಸಾಧ್ಯ? ಅನವಶ್ಯಕವಾಗಿ ವಿದ್ಯಾರ್ಥಿಯ ಜನಿವಾರ ತೆಗೆಸಿ ನಮ್ಮ ಸಮಾಜಕ್ಕೆ ಅಪಮಾನಿಸಿದ್ದು ಖಂಡನಾರ್ಹ. ಕಳೆದ ವರ್ಷವೂ ಸಹಿತ ಇದೇ ರೀತಿಯಾಗಿ ನಡೆದ ಸಂದರ್ಭದಲ್ಲಿಯೂ ನಾವು ಹೋರಾಟ ಮಾಡಿದ್ದೆವು. ಆದರೆ ಪುನಃ ಮತ್ತೇ ಅದೇ ಘಟನೆ ನಡೆದದ್ದು ನಮ್ಮ ಸಮಾಜಕ್ಕೆ ಮಾಡಿದ ಅಪಮಾನವಾಗಿದೆ ಎಂದರು.

ಅಖಿಲ ಭಾರತೀಯ ಬ್ರಾಹ್ಮಣ ಮಹಾ ಸಂಘದ ರಾಜ್ಯ ಉಪಾಧ್ಯಕ್ಷರು ಹಾಗೂ ಕಣ್ವ ಮಠ ವಿಜಯಪುರ ಶಾಖೆಯ ವಿಚಾರಣಕರ್ತ ರಾಘವೇಂದ್ರ ಆಲಗೂರ ಮಾತನಾಡಿ, ಕಳೆದ ವರ್ಷವೇ ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದರೂ ಮತ್ತೆ ಬ್ರಾಹ್ಮಣನ ಅಸ್ಮಿತೆಯಾದ ಜನಿವಾರನ್ನು ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಯಿಂದ ತೆಗೆದಿದ್ದು ಖೇದಕರ. ಈ ಘಟನೆಯಲ್ಲಿ ಭಾಗಿಯಾದ ಸಿಬ್ಬಂದಿಗಳನ್ನು ವಜಾ ಗೊಳಿಸಬೇಕು. ಮುಂದೆ ಮತ್ತೇ ಇದೇ ರೀತಿ ಘಟನೆ ನಡೆದಲ್ಲಿ ಬ್ರಾಹ್ಮಣ ಸಮುದಾಯ ರಾಜ್ಯಾದ್ಯಂತ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನಕಾರ್ಯದರ್ಶಿ ಪವನ ಕುಲಕರ್ಣಿ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಸಮೀರ್ ಕುಲಕರ್ಣಿ, ನಗರ ಅಧ್ಯಕ್ಷ ಪ್ರಶಾಂತ ದೇಶಪಾಂಡೆ, ಯುವ ಘಟಕ ಜಿಲ್ಲಾಧ್ಯಕ್ಷ ರೋಹನ್ ಆಪ್ಟೆ, ಮಹಿಳಾ ಪ್ರಧಾನಕಾರ್ಯದರ್ಶಿ ಮಿತಾ ದೇಸಾಯಿ, ಯುವ ಘಟಕ ಜಿಲ್ಲಾ ಪ್ರಧಾನಕಾರ್ಯದರ್ಶಿ ವಿವೇಕ ತಾವರಗೇರಿ, ಯುವ ಘಟಕ ನಗರ ಅಧ್ಯಕ್ಷ ಹರೀಶ

ಜೋಶಿ ವೆಂಕಟೇಶ ಗುಡಿ , ಕೃಷ್ಣ ಗುನ್ನಾಳಕರ, ಗೋವಿಂದ ಜೋಶಿ, ವಿಜಯ್ ಜೋಶಿ, ರಾಕೇಶ ಕುಲಕರ್ಣಿ, ರಾಕೇಶ ಜೋಶಿ, ಪವನ ಕಟ್ಟಿ, ಸುಧೀಂದ್ರ ಇಲ್ಲಾಳ, ಶಂಕರ ಕುಲಕರ್ಣಿ, ಶ್ರೀಹರಿ ಜೋಶಿ, ಸುಜಾತಾ ಕುಲಕರ್ಣಿ, ರಾಧಾ ತಾವರಗೇರಿ, ವಿಕಾಸ್ ಪದಕಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶ್ರಮಯೇವ ಜಯತೆ..

ಇಂದು (ಮೇ.01 ಶುಕ್ರವಾರ) "ಅಂತರಾಷ್ಟ್ರೀಯ ಕಾರ್ಮಿಕರ ದಿನಾಚರಣೆ" ಪ್ರಯುಕ್ತ ಈ ವಿಶೇಷ ಲೇಖನ




■ ಉದಯರಶ್ಮಿ ದಿನಪತ್ರಿಕೆ

ಮಾರ್ಟಿನ್ ಲೂಥರ್ ಕಿಂಗ್ ಅವರು, "ಮಾನವೀಯತೆಯನ್ನು ಹೆಚ್ಚಿಸುವ ಎಲ್ಲ ಕೆಲಸ-ಕಾರ್ಯಗಳು ಘನತೆ ಮತ್ತು ಪ್ರಾಮುಖ್ಯತೆಯನ್ನು ಹೊಂದಿವೆ ಮತ್ತು ಅದನ್ನು ನಾವು ಶ್ರೇಷ್ಠವೆಂದೇ ಪರಿಗಣಿಸಬೇಕು" ಎಂದು ಹೇಳಿದ್ದಾರೆ.

ಕೆಲಸದಲ್ಲಿ ಸಣ್ಣದು ದೊಡ್ಡದು ಎಂಬುದಿಲ್ಲ. ಪ್ರತಿಯೊಂದು ಕೆಲಸವನ್ನು ಪ್ರೀತಿಸಿ, ಗೌರವಿಸಿ. ಕಾರಣ ನಮ್ಮ ಜೀವನ ಆರಂಭವಾಗುವುದು ಕೆಳಗಿನಿಂದಲೇ ಪ್ರಾರಂಭವಾಗುತ್ತದೆಯೇ ಹೊರತು, ಮೇಲಿನಿಂದಲ್ಲ. ಆದ್ದರಿಂದ ಎಲ್ಲ ಕೆಲಸವು ತನ್ನದೇ ಆದ ಪ್ರಾಮುಖ್ಯತೆಯನ್ನು ಹೊಂದಿರುತ್ತದೆ ಎಂಬುದನ್ನು ನಾವೆಲ್ಲರೂ ಮನಗಾಣಬೇಕು. ಕಾರ್ಮಿಕ ವರ್ಗ ಪ್ರತಿಯೊಂದು ದೇಶದ ಅಭಿವೃದ್ಧಿಗೆ ಬೇರುಗಳಿದ್ದಂತೆ. ಅದಕ್ಕಂತಲೇ ಕಾರ್ಮಿಕರನ್ನು ಮತ್ತು ಕಾರ್ಮಿಕ ವರ್ಗವನ್ನು ದೇಶದ ಪ್ರಬಲ ಶಕ್ತಿ ಎಂದು ಪರಿಗಣಿಸಲಾಗುತ್ತದೆ. ವಿಶ್ವದಾದ್ಯಂತ ಶ್ರಮಿಕ ವರ್ಗದ ಮಹತ್ವ, ಅಗತ್ಯತೆ ಮತ್ತು ದೇಶದ ಅಭಿವೃದ್ಧಿಯಲ್ಲಿ ಅವರ ಪಾತ್ರದ ಕುರಿತು ಇಡೀ ಸಮಾಜಕ್ಕೆ ತಿಳಿಸಲು ಮತ್ತು ಅವರಿಗೂ ಸಾಮಾಜಿಕ ಗೌರವ ಸಲ್ಲಿಸುವ ಉದ್ದೇಶದಿಂದ ಪ್ರತಿ ವರ್ಷ ಮೇ 1 ರಂದು ಜಗತ್ತಿನಾದ್ಯಂತ "ಅಂತರಾಷ್ಟ್ರೀಯ ಕಾರ್ಮಿಕ ದಿನ" ವನ್ನು ಆಚರಿಸಲಾಗುತ್ತಿದೆ.

**ಇತಿಹಾಸ**

1886 ರಲ್ಲಿ ಅಮೇರಿಕಾ ದೇಶದಲ್ಲಿ ಕಾರ್ಮಿಕ-ರಿಂದ ತಮ್ಮ ಕೆಲಸವನ್ನು 8 ಗಂಟೆಗಳಿಗೆ ಮಾತ್ರ ಸಿಮೀತಗೊಳಿಸಬೇಕೆಂಬ ಬೇಡಿಕೆಯೊಂದಿಗೆ ಬೃಹತ್ಪ್ರಮಾಣದಲ್ಲಿ ಪ್ರತಿಭಟನೆ ನಡೆಯಿತು. ದೊಡ್ಡ ಮಟ್ಟದಲ್ಲಿ ನಡೆದ ಈ ಪ್ರತಿಭಟನೆಯಲ್ಲಿ ಅನೇಕ ಕಾರ್ಮಿಕರು ಗಾಯಗೊಂಡರು. ಇದಕ್ಕೆ ಹೇಮಾರ್ಕೆಟ್ ಅಫೇರ ಎಂತಲೂ ಕರೆಯುತ್ತಾರೆ. ಇದೇ ಮುಂದೆ ಅಂತರಾಷ್ಟ್ರೀಯ ಕಾರ್ಮಿಕ ದಿನದ ಆಚರಣೆಗೆ ನಾಂದಿಯಾಯಿತು. ಯುರೋಪಿನ ಹಲವು ಸಮಾಜವಾದಿ ಪಕ್ಷಗಳು ಸೇರಿ ಮೇ 1 ರಂದು ಕಾರ್ಮಿಕ ದಿನವೆಂದು ಕರೆ ಕೊಟ್ಟವು. ಅಂದಿನಿಂದ ಪ್ರತಿವರ್ಷವು ಮೇ 1 ರಂದು ಕಾರ್ಮಿಕ ಸಂಘಟನೆ,



ಹೋರಾಟ, ಶ್ರಮಿಕ ವರ್ಗದ ಸೇವೆ ಮತ್ತು ದೇಶಕ್ಕಾಗಿ ದುಡಿಯುತ್ತಿರುವ ನಿಸ್ವಾರ್ಥ ಕಾರ್ಮಿಕರಿಗೊಂದು ಗೌರವ ಸೂಚಕವಾಗಿ ಈ ದಿನವನ್ನು ಆಚ-ರಿಸಲಾಗುತ್ತಿದೆ.




**2026 ನೇಯ ವರ್ಷದ ಘೋಷವಾಕ್ಯ**


ಅಂತರಾಷ್ಟ್ರೀಯ ಕಾರ್ಮಿಕ ಸಂಸ್ಥೆ ಮತ್ತು ಇತರ ರಾಷ್ಟ್ರೀಯ ಸಂಸ್ಥೆಗಳು ಈ ವರ್ಷದ ಕಾರ್ಮಿಕ ದಿನವನ್ನು ಸುಸ್ಥಿರ ಪರಿಸರ ಮತ್ತು ಹವಾಮಾನದ ಬದಲಾವಣೆಯ ಪ್ರಕ್ರಿಯೆಯಲ್ಲಿ ಕಾರ್ಮಿಕರು ತಮ್ಮ ಮಾನಸಿಕ ಆರೋಗ್ಯ ಮತ್ತು ಸುರಕ್ಷತೆ ಮತ್ತು ಸಾಮಾಜಿಕ ನ್ಯಾಯ ದೊರೆಯಬೇಕೆಂಬ ಧ್ಯೇಯವಾಕ್ಯದೊಂದಿಗೆ "ಕಾರ್ಮಿಕರ ಮಾನಸಿಕ ಯೋಗಕ್ಷೇಮ, ಸಾಮಾಜಿ-ಕ ನ್ಯಾಯ ಮತ್ತು ಹವಾಮಾನ ಕ್ರಿಯೆ" ಎಂಬ ಘೋಷವಾಕ್ಯವನ್ನು ಹೊಂದಿದೆ. ಮಾನವನ ಸೃಜನಶೀಲತೆ ಮತ್ತು ಕಾರ್ಯನಿರ್ವಹಣೆಗೆ ಅನುಗುಣವಾಗಿ ನ್ಯಾಯಯುತ ವೇತನ ಮತ್ತು ಇನ್ನಿತರ ಕಾರ್ಮಿಕ ಕಲ್ಯಾಣ ಸೌಲಭ್ಯಗಳು ಸಿಗಬೇಕು. ಕಾರ್ಮಿಕರನ್ನು ಮಾಲಿಕರು ಅಥವಾ ಸಂಸ್ಥೆಯ ಆಸ್ತಿಯೆಂದು ಪರಿಗಣಿಸಿ ಅವರ ಕಷ್ಟ-ನಷ್ಟಗಳಿಗೆ ಸೂಕ್ತ ಸ್ಪಂದನೆ ದೊರೆಯಬೇಕೆನ್ನುವುದು ಈ ವರ್ಷದ ಆಚ-ರಣೆಯ ಧ್ಯೇಯವಾಗಿದೆ.

**ಆಚರಣೆಯ ಮಹತ್ವ**

ಇಡೀ ಸಮಾಜ ಮತ್ತು ರಾಷ್ಟ್ರದ ನಿರ್ಮಾಣ ಮತ್ತು ಅಭಿವೃದ್ಧಿಯಲ್ಲಿ ಕಾರ್ಮಿಕ ವರ್ಗದ ಕೊಡುಗೆಗಳನ್ನು ಗುರುತಿಸಿ, ಗೌರವಿಸುವ ಮಹತ್ವಾಕಾಂಕ್ಷೆಯೊಂದಿಗೆ ಕಾರ್ಮಿಕರ ಹಕ್ಕುಗಳು, ಸೇವೆಗೆ ತಕ್ಕ ಪ್ರತಿಫಲ, ಸಂಬಳ, ಕೆಲಸ ಮಾಡುವ ವೇಳೆ, ಕೆಲಸದಲ್ಲಿ ಎದುರಾಗುವ ತೊಂದರೆಗಳಿಂದ ಉಂಟಾಗುವ ಅನಾಹುತಗಳಿಂದ ರಕ್ಷಿಸಲು ಕಾರ್ಮಿಕ ಕಲ್ಯಾಣ ನಿಧಿ, ಪರಿಹಾರ ಹೀಗೆ ಹತ್ತು ಹಲವು ಸಮಸ್ಯೆಗಳಿಗೊಂಡು ಪರಿಹಾರ ಕಂಡುಕೊಂಡು ಆ ಕಾರ್ಮಿಕರು ಒತ್ತಡ ಮುಕ್ತ ಮತ್ತು ಕಾರ್ಯಕ್ಷಮೆಯೊಂದಿಗೆ ಸೇವೆ ಸಲ್ಲಿಸಲು ಅನುಕೂಲ ಕಲ್ಪಿಸಿ ಕೊಡುವುದು ಈ ದಿನದ ಆಚರಣೆಯ ಪ್ರಮುಖ ಉದ್ದೇಶವಾಗಿದೆ.

**ಕೊನೆಯ ನುಡಿ**

ಕಾರ್ಮಿಕರು ಸಾಕಷ್ಟು ಶ್ರಮವಹಿಸಿ ದೇಶದ ಆರ್ಥಿಕ ಅಭಿವೃದ್ಧಿಗೆ ಹೆಚ್ಚಿನ ಕೊಡುಗೆ ನೀಡಿದ್ದಾರೆ. ಕಾರ್ಮಿಕರಿಗೆ ಇರುವ ಹಕ್ಕುಗಳ ಬಗ್ಗೆ ಶಿಕ್ಷಣ ನೀಡುವ ಮೂಲಕ ಅವರ ಶ್ರಮವನ್ನು ಗುರುತಿಸಿ, ಮಾಲೀಕರಿಂದ ಕಾರ್ಮಿಕರಿಗಾಗುವ ಶೋಷಣೆಯಿಂದ ಅಗತ್ಯ ರಕ್ಷಣೆ ನೀಡುವುದು. ಅವರಿಗೆ ಕೆಲಸ ವೇಳೆ, ಸ್ಥಳ, ಪರಿಸರ ಮತ್ತು ವೃತ್ತಿ ಜೀವನ ಮುನ್ನಡೆಸುವ ಗುರಿಯನ್ನು ಹೊಂದಿರುವ ಯೋಜನೆ ಮತ್ತು ಉಪಕ್ರಮಗಳನ್ನು ಉತ್ತೇಜಿಸುವ ಉದ್ದೇಶವನ್ನು ಈ ದಿನದ ಆಚ-ರಣೆಯಲ್ಲಿ ಅಡಗಿದೆ. ಪ್ರತಿಯೊಂದು ಕಂಪನಿ ಅಥ-ವಾ ಉತ್ಪಾದನೆ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರನ್ನು ಮಾಲೀಕರೆಂದು ಕಾಣುವ ಭಾವ ನಮ್ಮಲ್ಲಿ ಬರಬೇಕು. ಕೆಲಸ ಮಾಡುವ ಸ್ಥಳ, ಪರಿಸರವು ಸ್ನೇಹಪರವಾದ ಸಂಬಂಧಗಳನ್ನು ಮತ್ತು



ಕಾರ್ಮಿಕರು-ಮಾಲೀಕರ ಮಧ್ಯೆ ಅನ್ಯೋನ್ಯವಾದ ಅನುಬಂಧವನ್ನು ಮೂಡಿಸುವಂತಾಗಬೇಕು. ಅಂದಾಗ ಆ ಕಂಪನಿಯ ಶ್ರೇಯೋಭಿವೃದ್ಧಿಗೆ ಆ ಕಾರ್ಮಿಕರು ಶ್ರಮಿಸಬಲ್ಲರು. ಅದಕ್ಕಾಗಿ ಅಮೂಲ್ಯವಾಗಿರುವ ಮಾನವ ಸಂಪನ್ಮೂಲವನ್ನು ರಕ್ಷಿಸುವ, ಹಕ್ಕುಗಳು ಒದಗಿಸುವ, ಸೌಲಭ್ಯ ನೀಡುವ ಮತ್ತು ಅವರಲ್ಲಿ ಮಾನವ-ಮಾನವ ಸಂಬಂಧಗಳು ಗರಿಗೆದರುವ ಲಕ್ಷಣಗಳು ಕಾಣಸಿಗಬೇಕು. ಈ ದಿನವು ಕಾರ್ಮಿಕರ ಹೋರಾಟಕ್ಕೆ ಸಿಕ್ಕ ಯಶಸ್ಸಿನ ನೆನಪಿಗಾಗಿ ಆಚ-ರಿಸಲಾಗುತ್ತದೆ.



ಲೇಖನ
– ಮಲ್ಲಪ್ಪ. ಸಿ. ಖೊದ್ನಾಪೂರ (ತಿಕೋಟಾ)
ವಿಜಯಪುರ

# ಕೆಎಸ್‌ಒಯು ಜೊತೆ ಶೈಕ್ಷಣಿಕ ಒಪ್ಪಂದ : ಡಾ. ಅರುಣ್ ಕುಮಾರ್



■ ಉದಯರಶ್ಮಿ ದಿನಪತ್ರಿಕೆ

ಹೆಚ್ ಡಿ ಕೋಟೆ: ಸರ್ಕಾರಿ ಪ್ರಥ-ಮ ದರ್ಜೆ ಕಾಲೇಜು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದೊಂದಿಗೆ ಶೈಕ್ಷಣಿಕ ಒಪ್ಪಂದ ಮಾಡಿಕೊಂಡಿದೆ ಎಂದು ಪ್ರಾಂಶುಪಾಲರಾದ ಡಾ. ಎಂ ಅರುಣ್ ಕುಮಾರ್ ಹೇಳಿದರು.

ಪಟ್ಟಣದ ಕಾಲೇಜು ವನಸಿರಿಯ ಬಯಲು ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ವನಸಿರಿ ನಾಡಿನ ಜನಪದ ಕಲರವ ಮತ್ತು ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಎಂ ಅರುಣ್ ಕುಮಾರ್, ಕೆಎಸ್‌ಒಯು ಜೊತೆ ಶೈಕ್ಷಣಿಕ ಒಪ್ಪಂದ ಮಾಡಿಕೊಂಡಿರುವುದು ತುಂಬಾ ಸಂತೋಷವಾಗುತ್ತದೆ. ಇದು ಉನ್ನತ ಶಿಕ್ಷಣದ ಗುಣಮಟ್ಟ, ನಾವೀನ್ಯತೆ ಮತ್ತು ಅಂತರರಾಷ್ಟ್ರೀಯ ಸಹಕಾರವನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ. ಜೊತೆಗೆ ಜಾಗತೀಕರಣದ ಯುಗದಲ್ಲಿ ಜ್ಞಾನ ಹಂಚಿಕೆ, ಹೊಸ ತಂತ್ರಜ್ಞಾನಗಳ ಅಳವಡಿಕೆ ಮತ್ತು ಶೈಕ್ಷಣಿಕ ಗುಣಮಟ್ಟವನ್ನು ಸುಧಾರಿಸುವುದು ಇದರ ಮುಖ್ಯ ಗುರಿಯಾಗಿದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯದ ಇತಿಹಾಸ ಅಧ್ಯಯನ ಮತ್ತು ಸಂಶೋಧನ ವಿಭಾಗದ ಮುಖ್ಯಸ್ಥ ಡಾ. ರಾಮೇಗೌಡ ಮಾತನಾಡಿ,

ಗ್ರಾಮೀಣ ಭಾಗದ ಸೊಗಡು ಎಷ್ಟೇ ಹಣ ಕೊಟ್ಟರು ಬೇರೆಡೆ ಎಲ್ಲೂ ಸಿಗುವುದಿಲ್ಲ. ನಮ್ಮ ಪೂರ್ವಿಕರು ಬೆಳೆದ ಬೆಳೆಯನ್ನು ಒಕ್ಕಣೆ ಮಾಡಲು ರಾಗಿ ಕಣವನ್ನು ಬಳಸುತಿದ್ದರು. ಅದರ ಗಮ್ಮತೆ ಗಮ್ಮತ್ತು, ಕೆಲವು ದಿನಸಿಗಳನ್ನು ಓನಕೆಯಿಂದ ಕುಟ್ಟಿ ಕಾಳು ತೆಗೆಯುತ್ತಿದ್ದರು, ಮೊರೆ. ಷೇರು. ಪಾವು ಇಂತಹ ವಸ್ತುಗಳನ್ನು ನೋಡಿ ತುಂಬಾ ವರ್ಷಗಳೇ ಕಳೆದು ಹೋಗಿದ್ದವು. ಈಗ ಇವುಗಳನ್ನು ಇಲ್ಲಿ ನೋಡಿ ತುಂಬಾ ಸಂತೋಷವಾಯಿತು. ಹೆಚ್ ಡಿ ಕೋಟೆ ತಾಲೂಕಿನಲ್ಲಿ ಅರಣ್ಯ ಸಂಪತ್ತು, ಜಲ ಸಂಪತ್ತು ಹೆಚ್ಚಾಗಿದ್ದು, ಈ ತಾಲೂಕನ್ನು ಪುನ್ನಾಟ ನಾಡು ಎಂದು ಕರೆಯಲಾಗುತ್ತಿತ್ತು. ಇದರ ಬಗ್ಗೆ ಮತ್ತಷ್ಟು ತಿಳಿಯಲು ಇತಿಹಾಸ ಓದಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಅರುಣ್ ಕುಮಾರ್, ಡಾ ಗಣೇಶ್, ಡಾ ಎನ್. ಪುಟ್ಟರಾಜು, ಪ್ರೊ.ಕತ್ಯಾಯಿನಿ, ಪ್ರೊ. ಪೂರ್ಣಿಮ, ಪ್ರೊ. ಗುರುದತ್ತ ಕಾಮತ್, ಪ್ರೊ. ಶಾಹಿಕಲಾ, ಪ್ರೊ.ಕೆಂಪರಾಜು, ಡಾ. ಪುಷ್ಪಲತಾ ಪಿ, ದಮ್ಮೂರಪ್ಪ ಕೆ, ಬೋರಮ್ಮ ಹೆಚ್ ಅಂಗಡಿ, ಬಾಲಾಜಿ ಕೆ.ವಿ , ರಾಜಶೇಖರ್ ಎಸ್, ಮಂಜು ಎಸ್, ಪ್ರವೀಣ್ ಕುಮಾರ್, ದೇವರಾಜು ಆನಗಟ್ಟಿ , ನಿಂಗರಾಜಯ್ಯ, ಸಣ್ಣಯ್ಯ ಚಿಕ್ಕಗೌಡನಹಳ್ಳಿ, ವಿನಯ್, ಸೋಮಶೇಖರ್ ಆರಾಧ್ಯ, ರುಕ್ಮಿಣಿ, ಅಭಿಲಾಷ್, ಕ್ಲರ್ಕ್ ಸ್ವಾಮಿ ಸೇರಿದಂತೆ ಜನಪದ ಕಲಾವಿದರು, ವಿದ್ಯಾರ್ಥಿಗಳು ಇದ್ದರು.

# ಮದರಾ (ಕೆ) ; ಪತ್ನಿ ಕೊಂದು ಬಾವಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡ ಪತಿ

ಅಫಜಲಪುರ:ಕೌಟುಂಬಿಕ ಕಲಹದ ಕಾರಣ ಪತಿ ತನ್ನ ಪತ್ನಿಯನ್ನು ಬರ್ಬರವಾಗಿ ಕೊಲೆ ಮಾಡಿ ನಂತರ ಮಗುವಿನೊಂದಿಗೆ ಬಾವಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಅಫಜಲಪುರ ತಾಲ್ಲೂಕಿನ ಮದರಾ (ಕೆ) ಗ್ರಾಮದಲ್ಲಿ ನಡೆದಿದೆ.

ಲಕ್ಷ್ಮೀಪುತ್ರ ಎಂಬಾತ ತನ್ನ ಪತ್ನಿ ಅಂಜಲಿ (23) ಯನ್ನು ಮನೆಯಲ್ಲೇ ಕುಡುಗೋಲಿನಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿದ್ದಾನೆ. ಹೆಂಡತಿಯನ್ನು ಕೊಂದ ನಂತರ, ತನ್ನ ಪುಟ್ಟ ಮಗುವನ್ನು ಎತ್ತಿಕೊಂಡು ಮದರಾ (ಕೆ) ಗ್ರಾಮದ ಸಮೀಪದ ಬಾವಿಗೆ ಜಿಗಿದಿದ್ದಾನೆ.

ಲಕ್ಷ್ಮೀಪುತ್ರ ಮಗುವಿನೊಂದಿಗೆ ಬಾವಿಗೆ ಹಾರುತ್ತಿರುವುದನ್ನು ಗಮನಿಸಿದ ಸ್ಥಳೀಯರು ತಕ್ಷಣ ಸ್ಥಳಕ್ಕೆ ಧಾವಿಸಿದ್ದಾರೆ. ಸಮಯಪ್ರಜ್ಞೆ ಮೆರೆದ ಗ್ರಾಮಸ್ಥರು ಕೂಡಲೇ ಬಾವಿಗೆ ಜಿಗಿದು ಮಗುವನ್ನು ಸುರಕ್ಷಿತವಾಗಿ ರಕ್ಷಿಸುವಲ್ಲಿ ಯಶಸ್ವಿಯಾಗಿದ್ದಾರೆ. ಆದರೆ, ಲಕ್ಷ್ಮೀಪುತ್ರ ಬಾವಿಯ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾನೆ.

ಈ ಘಟನೆ ನಡೆದ ತಕ್ಷಣ ರೇವೂರು ಪೊಲೀಸರು ಮತ್ತು ಸೋಕೋ ತಂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಂಜಲಿಯ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ಬಾವಿಯಿಂದ ಲಕ್ಷ್ಮೀಪುತ್ರನ ಶವವನ್ನು ಹೊರತೆಗೆಯಲಾಗಿದೆ.

# ಕೃಷಿ ಮತ್ತು ಉದ್ಯಮಿ ವಲಯಕ್ಕೆ ಹೆಚ್ಚಿನ ಒತ್ತು :ಸಿಇಓ ರಿಷಿ ಆನಂದ್

■ ಉದಯರಶ್ಮಿ ದಿನಪತ್ರಿಕೆ



## ವಿಜಯಪುರ ಜಿಲ್ಲೆಯ ವಾರ್ಷಿಕ ಸಾಲ ಯೋಜನೆ ಕೈಪಿಡಿ ಬಿಡುಗಡೆ | 16367.83 ಕೋಟಿ ರೂ. ವಾರ್ಷಿಕ ಸಾಲ ಯೋಜನೆ

ವಿಜಯಪುರ: ಜಿಲ್ಲೆಯ ಆರ್ಥಿಕ ಪ್ರಗತಿಗೆ ಪೂರಕವಾಗಿರುವ 2026-2027ನೇ ಹಣಕಾಸು ವರ್ಷದ ಜಿಲ್ಲಾ ವಾರ್ಷಿಕ ಸಾಲ ಯೋಜನೆಯನ್ನು ಬುಧವಾರ ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ಬಿಡುಗಡೆ ಮಾಡಲಾಯಿತು.

ಜಿಲ್ಲೆಯ ಅಗ್ರಣೀಯ ಬ್ಯಾಂಕ್ ಆಗಿರುವ ಕೆನರಾ ಬ್ಯಾಂಕ್ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು ಈ ಸಾಲಿನ ವಾರ್ಷಿಕ ಸಾಲ ಯೋಜನೆ ಕೈಪಿಡಿ ಬಿಡುಗಡೆಗೊಳಿಸಿದರು.

ಪ್ರಸಕ್ತ ವರ್ಷದ ಸಾಲ ಯೋಜನೆಯ 16367.83 ಕೋಟಿ ರೂ. ವಿತರಣೆಯ ಗುರಿಯನ್ನು ಹೊಂದಿದೆ. ಇದು ಕಳೆದ ವರ್ಷದ ವಾರ್ಷಿಕ ಸಾಲ ಯೋಜನೆಯ ಶೇಕಡಾ 10.90 ಪಟ್ಟು ಹೆಚ್ಚಿನ ಗುರಿಯಾಗಿದೆ. ಆದ್ಯತಾ ವಲಯಕ್ಕೆ: ಒಟ್ಟು ಯೋಜನೆ ಶೇ:69.59 ರಷ್ಟು ಅಂದರೆ ರೂ11389.96 ಕೋಟಿ ಮೀಸಲಿಡಲಾಗಿದೆ. ಕೃಷಿ ವಲಯಕ್ಕೆ: ಒಟ್ಟು ಯೋಜನೆ ಶೇ: 51.46 ರಷ್ಟು ಅಂದರೆ 8422.71 ಕೋಟಿ ರೂಪಾಯಿ ಮೀಸಲಿಡಲಾಗಿದೆ. ಉದ್ಯಮಿ ವಲಯಕ್ಕೆ: ಒಟ್ಟು ಯೋಜನೆ ಯೋಜನೆಯ ಶೇ:16.90 ಅಂದರೆ ರೂ2765.48 ಕೋಟಿ ಮೀಸಲಿಡಲಾಗಿದೆ. ಶಿಕ್ಷಣ ಸಾಲ ರೂ 53.43 ಕೋಟಿ, ವಸತಿ ಸಾಲ ರೂ 94.07 ಕೋಟಿ ಮತ್ತು ಇತರೆ ಸಾಲ ರೂ 28.84 ಕೋಟಿ ಸಾಲದ ಗುರಿ ಹೊಂದಲಾಗಿದೆ.

ಈ ಸಮಯದಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು ಮಾತನಾಡಿ, ಬ್ಯಾಂಕುಗಳು ಸಕಾಲದಲ್ಲಿ ಮೇಲಾಧಾರ ರಹಿತ ಸಣ್ಣ ಸಾಲುಗಳನ್ನು ನಿರುದ್ಯೋಗಿಗಳಿಗೆ ಕೊಟ್ಟರೆ, ನಿರುದ್ಯೋಗ ನಿರ್ಮೂಲನೆಗೆ ಸಹಕಾರಿ ಯಾಗುವದು ಎಂದು ತಿಳಿಸಿದರು.

ಕಳೆದ ಸಾಲಿನ ವಾರ್ಷಿಕ ಯೋಜನೆಯ ಪ್ರಗತಿಯ ಅಂಕಿ ಅಂಶಗಳನ್ನು ಅಗ್ರಣಿ ಬ್ಯಾಂಕ್ ಮುಖ್ಯ ಪ್ರಬಂಧಕರಾದ ಕೆ ಸಿದ್ದಯ್ಯ ಅವರು ವಿವರವಾಗಿ ತಿಳಿಸಿದರು. ಸಾಲ ಮತ್ತು ಠೇವಣಿಯ ಅನುಪಾತ ಶೇಕಡಾ 106 ಆಗಿದ್ದು, ಅತ್ಯುತ್ತಮ ಗುರಿ ಸಾಧನೆ ಎಂದು ಅವರು ತಿಳಿಸಿದರು.

ಈ ವೇಳೆ ನಾಬಾರ್ಡ್ ಡಿಡಿ ಎಂ ಶ ವಿಕಾಸ ರಾಠೋಡ, ಕೆನರಾ ಬ್ಯಾಂಕ್ ವಿಭಾಗಿಯ ಪ್ರಬಂಧಕ ದೀಪಕ್ ಕುಮಾರ, ಕರ್ನಾಟಕ ಗ್ರಾಮೀಣ ಬ್ಯಾಂಕ್ ಪ್ರಾದೇಶಿಕ ವ್ಯವಸ್ಥಾಪಕ ಅಶೋಕ ಸೋಂಗರಿ ಮುಖ್ಯ ವ್ಯವಸ್ಥಾಪಕ ವಿ ಬಿ ಕುಲಕರ್ಣಿ, ಎಸ್ ಬಿ ಐ ಮುಖ್ಯವಸ್ಥಾಪಕ ಹರೀಶ್ ನಾಯಕ ವಿನೋದ್ ಮಾದರ, ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಪ್ರಬಂಧಕ ಅನಿಲ ಮಹಾಂಕಾಳಿ, ಡಿಸಿಸಿ ಬ್ಯಾಂಕ್ ಪ್ರಬಂಧಕ ರಮೇಶ್ ಹಿಟ್ಟನಹಳ್ಳಿ, ಐಸಿಐಸಿಐ ಬ್ಯಾಂಕ್ ಪ್ರಬಂಧಕ ಶಿವಪುತ್ರ ನಿಂಬಾಳ, ಸೂರ್ಯೋದಯ ಎಫ ಬಿ ಪ್ರಬಂಧಕ ಪ್ರದೀಪ್, ಕೋಟಕ್ ಮಹೀಂದ್ರಾ ಬ್ಯಾಂಕ್ ಪ್ರಬಂಧಕ ರವೀಂದ್ರ ಅಂಗಡಿ ಸೇರಿದಂತೆ ವಿವಿಧ ಬ್ಯಾಂಕುಗಳ ಜಿಲ್ಲಾ ಸಂಯೋಜಕರು ಮತ್ತು ಲೈನ್ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಪಘಾತ ತಡೆಗೆ ಸುರಕ್ಷತಾ ಕ್ರಮ ಕೈಗೊಳ್ಳಿ

■ ಉದಯರಶ್ಮಿ ದಿನಪತ್ರಿಕೆ



## ವಿಜಯಪುರದಲ್ಲಿ ನಡೆದ ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅಧಿಕಾ-ರಿಗಳಿಗೆ ಸೂಚನೆ

ವಿಜಯಪುರ: ಜಿಲ್ಲೆಯಲ್ಲಿ ಅಪಘಾತ ತಡೆಗೆ ಜಿಲ್ಲೆಯಲ್ಲಿರುವ ಅಪಘಾತ ವಲಯಗಳನ್ನು ಗುರುತಿಸಿ ರಸ್ತೆ ಅಪಘಾತ ತಡೆಯಲು ಸೂಕ್ತ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಸ್ತೆ ಅಪಘಾತ ತಡೆಗೆ ರಾಷ್ಟ್ರೀಯ ಹೆದ್ದಾರಿ, ಜಿಲ್ಲಾ ಲೋಕೋಪಯೋಗಿ ಇಲಾಖಾ ವ್ಯಾಪ್ತಿಯ ಮುಖ್ಯ ರಸ್ತೆ ಸೇರಿದಂತೆ ಅಪಘಾತ ವಲಯಗಳಲ್ಲಿ ಅಪಘಾತ ಪ್ರಮಾಣ ತಗ್ಗಿಸಲು ಸಂಬಂಧಿಸಿದ ಇಲಾಖೆಗಳು ಮಾಹಿತಿ ಫಲಕಗಳನ್ನು ಅಳವಡಿಸಬೇಕು. ಸೂಕ್ತ ಗುರುತು ಫಲಕ, ಅಗತ್ಯವಿದ್ದಲ್ಲಿ ಬ್ಯಾರಿಕೇಡ್ ಸೇರಿದಂತೆ ಅಗತ್ಯ ಮುನ್ನೆಚ್ಚ-ರಿಕಾ ಕ್ರಮಗಳನ್ನು ವಹಿಸಿ ಅಪಘಾತಗಳು ನಡೆಯದಂತೆ ನೋಡಿಕೊಳ್ಳುವಂತೆ ಅವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿರುವ ಅಪಘಾತ ವಲಯಗಳಲ್ಲಿ ಅಲ್ಲಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಂಡು, ಪರಿಶೀಲಿಸಿ, ಅಪಘಾತ ತಡೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದ ಅವರು, ಅಧಿಕಾರಿಗಳು ಅತ್ಯಂತ ಜವಾಬ್ದಾ-ರಿಯುತವಾಗಿ ಕಾರ್ಯ ನಿರ್ವಹಿಸಬೇಕು. ಪದೇ ಪದೇ ಅಪಘಾತಗಳು ನಡೆಯುವ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಆ ಸ್ಥಳಗಳಲ್ಲಿ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸಿ ಅಪಘಾತಗಳ ತಡೆಗೆ ಸೂಕ್ತ ಕ್ರಮ ವಹಿಸಬೇಕು. ಅವಶ್ಯವಿದ್ದೆಡೆ ಸೈನೇಜ್ ಬೋರ್ಡ ಬ್ಯಾರಿಕೇಡ್ ಹಾಕಬೇಕು. ರಸ್ತೆ ಸುರಕ್ಷತಾ ಜಾಗೃತಿ ಅಭಿಯಾನ ಆಯೋಜಿಸುವ ಮೂಲಕ ಜನರಲ್ಲಿ ಸೂಕ್ತ ಜಾಗೃತಿ ಮೂಡಿಸುವಂತೆ ಅವರು ಸೂಚನೆ ನೀಡಿದರು. ನಗರದಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆಗನುಗುಣವಾಗಿ ಅಪಘಾತಗಳನ್ನು ನಿಯಂತ್ರಿಸಲು ಜಿಲ್ಲಾಧಿಕಾರಿಗಳು ವಿವಿಧ ಇಲಾಖೆಗಳಿಗೆ ಸೂಚನೆ ನೀಡಿದರು.

ನಗರದಲ್ಲಿ ರಸ್ತೆ ಸುರಕ್ಷಾ ನಿಯಮಗಳನ್ನು ಅನುಸ-ರಿಸಲು ವಾಹನ ಸವಾರರಿಗೆ ತಿಳಿಸಿ ಹೇಳಬೇಕು ಎಂದು ಅಧಿಕಾರಿಗಳಿಗೆ ಸಲಹೆ ಮಾಡಿದ ಅವರು, ರಸ್ತೆ ಸುರಕ್ಷತೆಗೆ ಸಂಬಂಧಿಸಿದಂತೆ ನೀಡಲಾದ ಸೂಚನೆಗಳ ಬಗ್ಗೆ ವರದಿ ಸಲ್ಲಿಸಲು ಲೋಕೋಪಯೋಗಿ ಇಲಾಖೆಗೆ ಜಿಲ್ಲಾಧಿಕಾರಿಗಳು ಸೂಚಿಸಿದರು. ರಸ್ತೆ ವಿಭಜಕಗಳನ್ನು ಅನಧಿಕೃತವಾಗಿ ಒಡೆದು ವಾಹನ ಸವಾರರು ಸಂಚ-ರಿಸುತ್ತಿದ್ದಾರೆ. ಇವುಗಳನ್ನು ತಕ್ಷಣವೇ ಮುಚ್ಚಿ, ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿಗಳಲ್ಲಿನ 'ಅಪಘಾತ ವಲಯಗಳಲ್ಲಿ ಸುಧಾರಣೆಗೆ ಪ್ರತಿಕ್ರಿಯಿಸಿರುವ ಹೆದ್ದಾರಿ ಅಧಿಕಾರಿಗಳು, ಅಪಘಾತಗಳನ್ನು ತಡೆಗಟ್ಟಲು ಅತ್ಯಾಧುನಿಕ ತಂತ್ರಜ್ಞಾನ ಅಳವಡಿಸಲು ಕ್ರಮ ವಹಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ ಅವರು ಮಾತನಾಡಿ, ರಸ್ತೆಗಳಲ್ಲಿ ಅಳವಡಿಸಲಾದ ಗುರುತು ಫಲಕಗಳು ಹಾಗೂ ರಸ್ತೆ ನಿಯಮಗಳ ಪಾಲನೆಗೆ ವಾಹನ ಸವಾರರಲ್ಲಿ ಸೂಕ್ತ ತಿಳುವಳಿಕೆ ಮೂಡಿಸಬೇಕು. ಕಡ್ಡಾಯವಾಗಿ ನಿಯಮಗಳ ಪಾಲನೆ ಕುರಿತು ಜಾಗೃತಿ ಮೂಡಿಸಬೇಕು. ಈಗಾಗಲೇ ಗುರುತಿಸಲಾದ ಅಪಘಾತ ವಲಯ ಸ್ಥಳಗಳಾದ ಮನಗೂಳಿ ಮುದ್ದೇಬಿಹಾಳಕ್ರಾಸ್ ಸೇರಿದಂತೆ ಹೈಲೆವೆಲ್ ಬ್ಲಾಕ್‌ಪಾಟ್ಸ ಆಗಿರುವುದರಿಂದ ಅಪಘಾತ ತಡೆಗೆ ಅಗತ್ಯ ಕ್ರಮ ವಹಿಸುವಂತೆ ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳಿಗೆ ಸೂಚಿಸಿದರು.

ವಿಜಯಪುರದಿಂದ ಸೋಲಾಪುರ ಮಾರ್ಗದಲ್ಲಿ ಅಪಘಾತ ವಲಯ ಗುರುತಿಸಿದ್ದು, ಅಪಘಾತ ತಡೆಗೆ ಕ್ರಮವಹಿಸಲು ಸೂಚನೆ ನೀಡಲಾಯಿತು.

ಸಭೆಯಲ್ಲಿ ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಇಂಡಿ ಉಪ ವಿಭಾಗಾಧಿಕಾ-ರಿಗಳಾದ ಚಿದಾನಂದ ಗುರುಸ್ವಾಮಿ,ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ, ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿಗಳಾದ ಪ್ರಕಾಶ ವಡ್ಡರ, ಉಪ ಅರಣ್ಯ ಸಂರಕ್ಷಣಾಧಿಕಾರಿ ಮಲ್ಲಿಕಾರ್ಜುನ ಕುಸುನಾಳ, ಪಾಲಿಕೆಯ ಉಪ ಆಯುಕ್ತರಾದ ಮಹಾವೀರ ಬೋರಣ್ಣವರ, ಪ್ರಾದೇಶಿಕ ಸಾರಿಗೆ ಅಧಿಕಾರಿ ವಸೀಂ ಬಾಬಾ ಮುದ್ದೇಬಿಹಾಳ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಶಿಕ್ಷಕರ ಸಂಘಕ್ಕೆ ಮೇ 10ಕ್ಕೆ ಚುನಾವಣೆ : ಅಂದೇ ಫಲಿತಾಂಶ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ರಾಜ್ಯದ ಒಂದೂವರೆ ಲಕ್ಷ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರು ಸದಸ್ಯತ್ವ ಹೊಂದಿರುವ ಕರ್ನಾಟಕ ರಾಜ್ಯ ಪ್ರಾಥ–ಮಿಕ ಶಾಲಾ ಶಿಕ್ಷಕರ ಸಂಘ (ಕೆಎಸ್ ಪಿಎಸ್ ಟಿಎ ) 2026–31ರ ಅವಧಿಯ ಚುನಾವಣೆಗೆ ಸಂಬಂಧಿಸಿದ ಪರಿಷ್ಕೃತ ವೇಳಾಪಟ್ಟಿಯನ್ನು ರಾಜ್ಯ ಚುನಾವಣಾಧಿಕಾರಿಗಳು ಮಂಗಳವಾರ ಪ್ರಕಟಿಸಿದ್ದಾರೆ.

ಈ ಹಿಂದೆ ಏಪ್ರಿಲ್ 1ಕ್ಕೆ ಚುನಾವಣಾ ಅಧಿಸೂಚನೆ ಹೊರಡಿಸಲಾಗಿತ್ತು. ಆದರೆ, ಹೈಕೋರ್ಟ್ ಏಕಸದಸ್ಯ ಪೀಠದ ತಡೆಯಾಜ್ಞೆಯಿಂದಾಗಿ ಏ.18ರಂದು ಪ್ರಕ್ರಿಯೆ ಸ್ಥಗಿತಗೊಳಿಸಲಾಗಿತ್ತು. ಗೌರವಾನ್ವಿತ

ಮುಖ್ಯ ನ್ಯಾಯಮೂರ್ತಿಗಳಿದ್ದ ಹೈಕೋರ್ಟ್ ಪ್ರಧಾನ ವಿಭಾಗೀಯ ಪೀಠ ಮಂಗಳವಾರ ತಡೆಯಾಜ್ಞೆ ತೆರವುಗೊಳಿಸಿತ್ತು. ಇದರಿಂದ ಚುನಾವಣೆ ಪ್ರಕ್ರಿಯೆ ಸ್ಥಗಿತಗೊಂಡಿದ್ದ ಹಂತದಿಂದಲೇ ಚುನಾವಣೆ ಪ್ರಕ್ರಿಯೆ ಪುನರಾರಂಭಗೊಂಡಿದೆ.

**ತಾಲ್ಲೂಕು/ ಯೋಜನಾ ಸಂಘಗಳ ಕಾರ್ಯಕಾರಿ ಸಮಿತಿಗೆ ಚುನಾವಣೆ;**

ತಾಲ್ಲೂಕು/ ಯೋಜನಾ ಶಾಖೆಯ ಕಾರ್ಯಕಾರಿ ಸಮಿತಿ ಸದಸ್ಯರ ಚುನಾವಣೆಗೆ ಈಗಾಗಲೇ ನಾಮಪತ್ರ ಸಲ್ಲಿಕೆ, ಪರಿಶೀಲನೆ, ವಾಪಸ್ಸಾತಿ, ಅಂತಿಮ ಕಣದಲ್ಲಿ ಉಳಿದ ಅಭ್ಯರ್ಥಿಗಳ ಪ್ರಕಟಣೆವರೆಗೂ ಚುನಾವಣಾ ಪ್ರಕ್ರಿಯೆಗಳು ಮುಗಿದು, ನಿಗದಿತ ಸ್ಥಾನದಷ್ಟೇ ಅಭ್ಯರ್ಥಿಗಳು ಚುನಾಚಣೆ ಕಣದಲ್ಲಿ ಉಳಿದರೆ ಅವಿರೋಧ ಆಯ್ಕೆಯ ಫಲಿತಾಂಶ ಘೋಷಣೆಯಾಗಿತ್ತು. ನಿಗದಿತ ಸ್ಥಾನಕ್ಕಿಂತ ಹೆಚ್ಚು ಅಭ್ಯರ್ಥಿಗಳು ಕಣದಲ್ಲಿ ಉಳಿದ ಕಡೆ ಮತದಾನ ಜರುಗಿಸಲು ಒಂದು ದಿನ ಬಾಕಿ ಉಳಿದು ಅಭ್ಯರ್ಥಿಗಳ ಚುನಾವಣೆ ಪ್ರಚಾರ ಚಾಲ್ತಿಯಲ್ಲಿತ್ತು. ಈಗ ಹಂತದಿಂದಲೇ ಚುನಾವಣೆ ಪ್ರಕ್ರಿಯೆ ಪುನಃ ಆರಂಭಗೊಳ್ಳಲಿವೆ.

ಅಗತ್ಯ ಇರುವ ಕಡೆಗಳಲ್ಲಿ ಮೇ 1ಕ್ಕೆ ಬೆಳಗ್ಗೆ 8:30 ರಿಂದ ಸಂಜೆ 4:30ರವರೆಗೆ ಮತದಾನ ನಡೆದು ಆ ಬಳಿಕ ಅದೇ ದಿನ ರಾತ್ರಿ 6.30 ರಿಂದ ಮತ ಎಣಿಕೆ ಕಾರ್ಯ ನಡೆದು ಫಲಿತಾಂಶ ಪ್ರಕಟಗೊಳ್ಳಲಿದೆ.

**ತಾಲ್ಲೂಕು/ಯೋಜನಾ/ಜಿಲ್ಲಾ/ ರಾಜ್ಯ ಘಟಕಗಳ ಚುನಾವಣೆ;**

ಈ ಮೂರು ಹಂತದ ಪದಾಧಿಕಾರಿಗಳ ಚುನಾವಣೆ ಪ್ರಕ್ರಿಯೆ ಏಕಕಾಲದಲ್ಲಿ ನಡೆಯಲಿದೆ. ಚುನಾವಣೆಗೆ ಅರ್ಹ ಮತದಾರರ ಯಾದಿ ಮೇ 4 ಕ್ಕೆ ಪ್ರಕಟಗೊಳ್ಳಲಿದೆ.

ಮೇ 4 ಮತ್ತು 5 ಕ್ಕೆ ನಾಮಪತ್ರಗಳ ವಿತರಣೆ ಮತ್ತು ಸ್ವೀಕಾರ ನಡೆಯಲಿದ್ದು, ಅದೇ ದಿನ ಸಂಜೆ 5.30 ನಡೆದು ಕ್ರಮಬದ್ಧ ನಾಮ ಪತ್ರಗಳ ಯಾದಿ ಪ್ರಕಟಿಸಲಾಗುತ್ತದೆ.

ಮೇ. 6 ಕ್ಕೆ ಸಂಜೆ 5.30 ರವರೆಗೆ ನಾಮಪತ್ರ ಹಿಂಪಡೆಯಲು ಸಮಯವಿದೆ.

ಮೇ 10ಕ್ಕೆ ಬೆಳಗ್ಗೆ 9 ರಿಂದ ಮಧ್ಯಾಹ್ನ 12.30ರ ತನಕ ಚುನಾವಣೆ, ಮಧ್ಯಾಹ್ನ 1.30 ರ ನಂತರ ಮತ ಎಣಿಕೆ ನಡೆದು ಅಂದೇ ಫಲಿತಾಂಶ ಪ್ರಕಟಗೊಳ್ಳಲಿದೆ ಎಂದು ರಾಜ್ಯ ಚುನಾವಣಾಧಿಕಾರಿ ಮೆಹಬೂಬ್ ಪಾಷಾ ಮೂಲಿಮನಿ ತಿಳಿಸಿದ್ದಾರೆ.

# ವಿಜಯಪುರ ಜಿಲ್ಲಾ ಬಾಲಭವನದ ಬೇಸಿಗೆ ಶಿಬಿರದ ಸಮಾರೋಪ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಸಮಾಜದಲ್ಲಿ ಉನ್ನತ ಶ್ರೇಣಿಗೆ ಮಕ್ಕಳು ತಲುಪಬೇಕಾದರೆ ಅವಮಾನ, ಅನುಮಾನ ನಂತರ ಸನ್ಮಾನ ದೊರೆಯುತ್ತವೆ. ಹಾಗಾಗಿ ಶ್ರಮ ವಹಿಸಿ ಕಾರ್ಯ ನಿರ್ವಹಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಹೇಳಿದರು.

ಜಿಲ್ಲಾ ಬಾಲ ಭವನದಲ್ಲಿ ನಡೆದ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಕ್ಕಳಲ್ಲಿ ಕ್ರಿಯಾಶೀಲ ವ್ಯಕ್ತಿತ್ವ ವಿಕಸನಕ್ಕಾಗಿ ಚಟುವಟಿಕೆಯ ಮೂಲಕ ಮಕ್ಕಳಿಗೆ ತಿಳುವಳಿಕೆ ನೀಡಿದರು. ಮಕ್ಕಳು ಪಾಲಕರು ಮಾಡುವ ಕೆಲಸಗಳನ್ನು ಅನುಸರಿಸುತ್ತಾರೆ. ಹಾಗಾಗಿ ಮಕ್ಕಳ ಮುಂದೆ ಪಾಲಕರು ಮೊಬೈಲ್ ಬಳಕೆಯನ್ನು ನಿಯಮಿತವಾಗಿ ಮಾಡುವುದಾಗಿ ಹಾಗೂ ಮಕ್ಕಳಲ್ಲಿ ಸೃಜನಾತ್ಮಕ ಕಲಿಕೆಗೆ ಹೆಚ್ಚಿನ ಅವಕಾಶವನ್ನು ಮಾಡಿಕೊಡಬೇಕು ಎಂದರು. ಕರ್ನಾಟಕ ನಾಡ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಸುರೇಶ ಜತ್ತಿ ಮಾತನಾಡಿ, ಮಕ್ಕಳನ್ನು ಸಮಾಜದಲ್ಲಿ ಉತ್ತಮ ಪ್ರಜೆಯನ್ನಾಗಿ ಮಾಡಲು ಕ್ರೀಡೆ, ಯೋಗ, ಸಂಗೀತ, ಕರಾಟೆ, ಚಿತ್ರಕಲೆ, ಕರಕುಶಲ ವಸ್ತುಗಳ ತಯಾರಿಕೆ ಇತ್ಯಾದಿ ಚಟುವಟಿಕೆಗಳ ತರಬೇತಿ ಪಡೆಯುವುದು ಅಗತ್ಯವಾಗಿದೆ ಎಂದರು.

ಇಂತಹ ಚಟುವಟಿಕೆಗಳು ಬೇಸಿಗೆ ಶಿಬಿರದಲ್ಲಿರುತ್ತವೆ. ಅದರಲ್ಲಿ ಭಾಗವಹಿಸಿ ಸಸುಪಯೋಗ ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಮಕ್ಕಳಿಗೆ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು.

ಜಿಲ್ಲಾ ಮಿಷನ್ ಸಂಯೋಜಕಿ ಭಾರತಿ ಪಾಟೀಲ, ದೀಪಾಕ್ಷಿ ಜಾನಕಿ, ನಾಗಶ್ರೀ ನಿಂಬಾಳ, ಎಸ್.ಸಿ.ಮ್ಯಾಗೇರಿ, ಜ್ಯೋತಿ, ನೂತನ ಬಿರಾದಾರ, ಅನಿತಾ ಬಿರಾದಾರ. ಬೇಸಿಗೆ ಶಿಬಿರದ ಸಂಪನ್ಮೂಲ ವ್ಯಕ್ತಿಗಳಾದ ಜಗದೀಶ ಗುಳೇದಗುಡ್ಡ (ಕರಾಟೆ), ವಾಸು ಕುಲಕರ್ಣಿ (ನೃತ್ಯ), ಸಿಕಂದರ್ ಮುಳವಾಡ (ಕರಕುಶಲ), ಸಿದ್ರಾಮ ಲ. ಬಳ್ಳಗಿಡದ (ಚಿತ್ರಕಲೆ), ಆಶ್ವಿನಿ ಪತ್ತಾರ (ಸಂಗೀತ) ಸೇರಿದಂತೆ ಮಹಿಳಾ ಸಬಲೀಕರಣ ಘಟಕದ ಸಿಬ್ಬಂದಿ, ಮಕ್ಕಳು ಹಾಗೂ ಪಾಲಕರು ಮತ್ತು ಜಿಲ್ಲಾ ಬಾಲಭವನದ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಧೂಳಾಗುಂಡಿಗೆ ಕಾಯಕಯೋಗಿ ಪ್ರಶಸ್ತಿ


ಕಲಬುರಗಿ: ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನ ಪರಿಷತ್ ವತಿಯಿಂದ ಕೊಡಮಾಡಲಾಗುವ ರಾಜ್ಯ ಮಟ್ಟದ ಕಾಯಕ ಯೋಗಿ ಪ್ರಶಸ್ತಿಗೆ ಇಲ್ಲಿನ ಸಮಾಜ ಸೇವಕ ಬಸವರಾಜ ಧೂಳಾಗುಂಡಿ ಅವರು ಆಯ್ಕೆಯಾಗಿದ್ದಾರೆ ಎಂದು ಪರಿಷತ್ ನ ಜಿಲ್ಲಾ ಘಟಕದ ಅಧ್ಯಕ್ಷ ರವೀಂದ್ರ ಶಾಬಾದಿ, ಪ್ರಧಾನ ಕಾರ್ಯದರ್ಶಿ ಡಾ. ಶಿವರಂಜನ ಸತ್ಯಂಪೇಟೆ ತಿಳಿಸಿದ್ದಾರೆ.

ಕಲಬುರಗಿಯ ಜಿಲ್ಲೆಯ ಕಾಳಗಿ ತಾಲ್ಲೂಕಿನ ಮಂಗಲಗಿ ಮೂಲದವರಾದ ಇವರು ಎಚ್.ಕೆ. ಇ. ಸಂಸ್ಥೆಯ ಪಿಡಿಎ ಇಂಜಿನಿಯರಿಂಗ್ ಕಾಲೇಜಿನಲ್ಲಿ ಸುಮಾರು 37 ವರ್ಷಗಳ ಕಾಲ ಸಹಾಯಕ ಬೋಧಕರಾಗಿ ಸೇವೆ ಸಲ್ಲಿಸಿದ್ದಾರೆ.

ವೈಚಾರಿಕತೆ,ವೈಜ್ಞಾನಿಕತೆಯ ವಚನ ಸಾಹಿತ್ಯ ಇವರಿಗೆ ಅಚ್ಚು ಮೆಚ್ಚು. ಲಿಂ. ಡಾ.ಬಸವರಾಜ ಮೋದಿ ಪ್ರತಿಷ್ಠಾಪಿಸಿದ ವಚನೋತ್ಸವ ಪ್ರತಿಷ್ಠಾನದ ಕಾ ಂ ಯ್ ರ್ ದ್ ಶ್ರ್ ಂ ಯ್ ಾ ಗಿ ವ್ ಎ ಎ ನ್ ್ನ ಡ್ ಸಿ ಕ್ ಊ ಂ ಡ್ ಎ ಹೊರಟಿದ್ದಾರೆ. 71ರ ಈ ಇಳಿವಯಸ್ಸಿನಲ್ಲೂ 17ರ ಹರೆಯದ ಹುಡುಗರಂತೆ ಸದಾ ಒಂದಿಲ್ಲೊಂದು ವಿಧಾಯಕ ಕಾರ್ಯಕ್ರಮಗಳಲ್ಲಿ ಸೇವೆ ಸಲ್ಲಿಸುತ್ತ ಬರುತ್ತಿದ್ದಾರೆ. ಹಿಟ್ಟಿನ ಗಿರಣಿ ಮಾಲೀಕರಾಗಿದ್ದರೂ ತಾವೇ ಸ್ವತಃ ಬೀಸುವ ಸ್ವಕಾಯಕ ಮಾಡುತ್ತಿದ್ದಾರೆ. ಇವರ ಈ ಅನುಪಮ ಸೇವೆ ಗುರುತಿಸಿ ಪ್ರಶಸ್ತಿ ನೀಡಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.


# ಪ್ರಸ್ತುತ ಸಮಾಜಕ್ಕೆ ಬಸವಣ್ಣನವರ ಆದರ್ಶಗಳು

■ ಉದಯರಶ್ಮಿ ದಿನಪತ್ರಿಕೆ



ವಿಶ್ವಗುರು ಬಸವಣ್ಣನವರು







ಬಸವಣ್ಣನವರ ತತ್ವಗಳು ಮತ್ತು ಆದ–ರ್ಶಗಳು ಕೇವಲ 12ನೇ ಶತಮಾನಕ್ಕೆ ಸೀಮಿತವಾಗದೆ, ಇಂದಿನ ಆಧುನಿಕ ಸಮಾಜದ ಜ್ವಲಂತ ಸಮಸ್ಯೆಗಳಿಗೆ ರಾಮಬಾಣದಂತಿವೆ. ಪ್ರಸ್ತುತ ಸಮಾಜ ಎದುರಿಸುತ್ತಿರುವ ಅಸಮಾನತೆ, ಭ್ರಷ್ಟಾಚಾರ ಮತ್ತು ಮಾನಸಿಕ ಅಶಾಂತಿಗೆ ಬಸವಣ್ಣನವರ 'ವಚನ ಸಂಸ್ಕೃತಿ' ಒಂದು ದಾ–ರಿದೀಪ.

ಇಂದಿಗೂ ಸಮಾಜದಲ್ಲಿ ಜಾತಿ ಮತ್ತು ವರ್ಗದ ಹೆಸರಿನಲ್ಲಿ ತಾರತಮ್ಯಗಳು ಜೀವಂತವಾಗಿವೆ. ಬಸವಣ್ಣನವರು ಅಂದೇ "ಇವನಾರವ ಇವನಾರವ ಎನ್ನದೆ, ಇವ ನಮ್ಮವ ಇವ ನಮ್ಮವ ಎಂದೆನಿಸಯ್ಯ" ಎಂದು ಸಾರುವ ಮೂಲಕ ಸಾರ್ವತ್ರಿಕ ಭ್ರಾತೃತ್ವದ ಸಂದೇಶ ನೀಡಿದ್ದರು. ಮೇಲು–ಕೀಳು ಎಂಬ ಭೇದಭಾವವಿಲ್ಲದ 'ಅನುಭವ ಮಂಟಪ'ವು ಇಂದಿನ ಪ್ರಜಾಪ್ರಭುತ್ವ ವ್ಯವಸ್ಥೆಗೆ ಅಡಿಪಾಯದಂತಿದೆ.

ಇಂದಿನ ಕಾಲದಲ್ಲಿ ನಿರುದ್ಯೋಗ ಮತ್ತು ಕೆಲಸದ ಬಗ್ಗೆ ಅಸಡ್ಡೆ ಹೆಚ್ಚಾಗುತ್ತಿದೆ. ಬಸವಣ್ಣನವರು "ಕಾಯಕವೇ ಕೈಲಾಸ" ಎಂಬ ಸಿದ್ಧಾಂತದ ಮೂಲಕ ಪ್ರತಿಯೊಬ್ಬರೂ ತಮ್ಮ ಶ್ರಮದಿಂದಲೇ ಜೀವನ ನಡೆಸಬೇಕೆಂದು ಬೋಧಿಸಿದರು. ಯಾವುದೇ ಕೆಲಸವು ಕೀಳಲ್ಲ, ಅದು ಪ್ರಾಮಾಣಿಕವಾಗಿದ್ದರೆ ಅದೇ ದೈವತ್ವಕ್ಕೆ ಸಮಾನ ಎಂಬ ಅವರ ಮಾತುಗಳು ಇಂದಿನ ಯುವಜನತೆಗೆ ಪ್ರೇರಣಾದಾಯಕ.

ಸಂಪತ್ತು ಒಂದೇ ಕಡೆ ಕ್ರೋಢೀಕರಣವಾಗುವುದು ಸಮಾಜದ ಅಸಮತೋಲನಕ್ಕೆ ಕಾರಣವಾಗುತ್ತದೆ. ತನಗಿರುವ ಹೆಚ್ಚಿನ ಲಾಭವನ್ನು ಸಮಾಜಕ್ಕೆ ಮರಳಿಸುವ 'ದಾಸೋಹ' ಪದ್ಧತಿಯನ್ನು ಅವರು ಪ್ರತಿಪಾದಿಸಿದರು. ಇದು ಇಂದಿನ 'ಕಾರ್ಪೊರೇಟ್ ಸೋಶಿಯಲ್ ರೆಸ್ಪಾನ್ಸಿಬಿಲಿಟಿ' (ಅಖಖ) ಗಿಂತಲೂ ಮಿಗಿಲಾದ ಮಾನವೀಯ ಮೌಲ್ಯವಾಗಿದೆ.

ಭ್ರಷ್ಟಾಚಾರ ಮತ್ತು ಅನೈತಿಕತೆ ಹೆಚ್ಚುತ್ತಿರುವ ಈ ಕಾಲದಲ್ಲಿ, ಬಸವಣ್ಣನವರ ಈ ವಚನ ಅತ್ಯಂತ ಪ್ರಸ್ತುತ..

"ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ,
ಮುನಿಯಬೇಡ, ಅನ್ಯರಿಗೆ ಅಸಹ್ಯಪಡಬೇಡ,
ತನ್ನ ಬಣ್ಣಿಸಬೇಡ, ಇದಿರ ಹಳಿಯಲು ಬೇಡ.."

ಇದು ಒಬ್ಬ ವ್ಯಕ್ತಿಯ ವ್ಯಕ್ತಿತ್ವ ವಿಕಸನಕ್ಕೆ ಬೇಕಾದ ಶಿಸ್ತು ಸಂಹಿತೆಯಾಗಿದೆ. ಅಂತಃಕರಣದ ಶುದ್ಧಿಯೇ ನಿಜವಾದ ಭಕ್ತಿ ಎಂದು ಅವರು ಸಾರಿದರು.

800 ವರ್ಷಗಳ ಹಿಂದೆಯೇ ಸ್ತ್ರೀಯರಿಗೆ ಸಮಾನ ಗೌರವ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯ ನೀಡಿದ ಕೀರ್ತಿ ಬಸವಣ್ಣನವರದ್ದು. ಅಕ್ಕಮಹಾದೇವಿ, ಆಯ್ದಕ್ಕಿ ಲಕ್ಕಮ್ಮನಂತಹ ಅನೇಕ ಶರಣೆಯರಿಗೆ ಅನುಭವ ಮಂಟಪದಲ್ಲಿ ಸ್ಥಾನ ನೀಡುವ ಮೂಲಕ ಲಿಂಗ ಸಮಾನತೆಯ ಕ್ರಾಂತಿ ಮಾಡಿದರು. ಇಂದಿಗೂ ಮಹಿಳಾ ಹಕ್ಕುಗಳ ಹೋರಾಟಕ್ಕೆ ಇವರ ವಿಚಾರಗಳೇ ಮಾದರಿ.



ಕಂದಾಚಾರ ಮತ್ತು ಅರ್ಥಹೀನ ಆಚ–ರಣೆಗಳ ಬದಲಾಗಿ ತರ್ಕಬದ್ಧ ಚಿಂತನೆಗೆ ಬಸವಣ್ಣ ಒತ್ತು ನೀಡಿದರು. "ದೇವಲೋಕ ಮರ್ತ್ಯಲೋಕ ಎಂಬುದು ಬೇರೆಲ್ಲಿದೆ?" ಎಂದು ಪ್ರಶ್ನಿಸುವ ಮೂಲಕ ಸಮಾಜದಲ್ಲಿನ ಮೂಢನಂಬಿಕೆಗಳನ್ನು ಹೋಗಲಾಡಿಸಲು ಶ್ರಮಿಸಿದರು.

ಇಂದು ನಾವು ಮಾತನಾಡುತ್ತಿರುವ ಪಾರ್ಲಿಮೆಂಟ್ ಅಥವಾ ಸಂಸತ್ತಿನ ವ್ಯವಸ್ಥೆಗೆ ಬಸವಣ್ಣನವರ 'ಅನುಭವ ಮಂಟಪ' ವೇ ಮೂಲ ಪ್ರೇರಣೆ. ಅಲ್ಲಿ ರಾಜ ಮಹಾರಾಜರಿಂದ ಹಿಡಿದು ಕೆಳಹಂತದ ಕಾರ್ಮಿಕರವರೆಗೆ ಎಲ್ಲರಿಗೂ ಸಮಾನವಾಗಿ ಕುಳಿತು ಚರ್ಚಿಸುವ ಹಕ್ಕಿತ್ತು. ಜಾತಿ, ಮತ, ಪಂಥಗಳನ್ನು ಮೀರಿದ ಈ ಚರ್ಚಾ ವೇದಿಕೆ ಇಂದಿನ ರಾಜಕೀಯ ವ್ಯವಸ್ಥೆಗೆ ಸೈದ್ಧಾಂತಿಕ ಮಾರ್ಗದರ್ಶಿಯಾಗಿದೆ.

ಬಸವಣ್ಣನವರ ವಚನಗಳಲ್ಲಿ ಪ್ರಕೃತಿಯನ್ನು ದೈವಿಕವಾಗಿ ಕಾಣಲಾಗಿದೆ. "ದಯವಿಲ್ಲದ ಧರ್ಮವದಾವುದಯ್ಯ?" ಎಂದು ಪ್ರಶ್ನಿಸಿದ ಅವರು, ಪ್ರಾಣಿ ಸಂಕುಲ ಮತ್ತು ಸಸ್ಯ ಸಂಪತ್ತಿನ ಮೇಲೆ ದಯೆ ತೋರುವುದು ಧರ್ಮದ ಮೂಲ ಎಂದರು. ಇಂದು ಜಾಗತಿಕ ತಾಪಮಾನ ಮತ್ತು ಪರಿಸರ ನಾಶದ ಸಂಕಟದಲ್ಲಿರುವ ನಮಗೆ, ಪ್ರಕೃತಿಯನ್ನು ಗೌರವಿಸುವ ಅವರ ಸೌಮ್ಯ ಜೀವನಶೈಲಿ ಅತ್ಯಂತ ಅಗತ್ಯವಾಗಿದೆ.

ಅಂದು ಜ್ಞಾನವು ಕೇವಲ ಸಂಸ್ಕೃತದಂತಹ ಕಠಿಣ ಭಾಷೆಗಳಲ್ಲಿ ಅಡಕವಾಗಿತ್ತು. ಬಸವಣ್ಣನವರು ಸಾಮಾನ್ಯ ಜನರಿಗೆ ಅರ್ಥವಾಗುವ 'ಕನ್ನಡ' ಭಾಷೆಯಲ್ಲಿ ವಚನಗಳನ್ನು ರಚಿಸುವ ಮೂಲಕ 'ಜ್ಞಾನದ ಪ್ರಜಾಪ್ರಭುತ್ವೀಕರಣ' ಮಾಡಿದರು. ಸಂಕೀರ್ಣ ಸತ್ಯಗಳನ್ನು ಸರಳವಾಗಿ ತಿಳಿಸುವ ಅವರ ಈ ಕಲೆ ಇಂದಿನ ಶೈಕ್ಷಣಿಕ ಮತ್ತು ಸಂವಹನ ಕ್ಷೇತ್ರಕ್ಕೆ ಒಂದು ದೊಡ್ಡ ಪಾಠ.

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಜನರು ಒತ್ತಡ ಮತ್ತು ಖಿನ್ನತೆಗೆ ಒಳಗಾಗುತ್ತಿದ್ದಾರೆ. ಬಸವಣ್ಣನವರು "ದೇವನೊಬ್ಬ ನಾಮ ಹಲವು" ಎನ್ನುವ ಮೂಲಕ ಧಾರ್ಮಿಕ ಅಸಹನೆಯನ್ನು ಹೋಗಲಾಡಿಸಿ, ಮನಸ್ಸನ್ನು ಸ್ಥಿತಪ್ರಜ್ಞೆಯತ್ತ ಕೊಂಡೊಯ್ಯುವ ಮಾರ್ಗ ತೋರಿಸಿಕೊಟ್ಟರು. "ಲೋಕದ ಡೊಂಕ ನೀವೇಕೆ ತಿದ್ದುವಿರಿ, ನಿಮ್ಮ ನಿಮ್ಮ ತನುವ ಸಂತವಿಸಿಕೊಳ್ಳಿ" ಎಂಬ ಅವರ ಮಾತುಗಳು, ಮೊದಲು ನಮ್ಮನ್ನು ನಾವು ತಿದ್ದಿಕೊಳ್ಳುವ ಮೂಲಕ ಸಮಾಜವನ್ನು ಬದಲಿಸಬಹುದು ಎಂಬ ಆತ್ಮವಿಶ್ವಾಸ ನೀಡುತ್ತವೆ.

ಜಗತ್ತಿನಾದ್ಯಂತ ಯುದ್ಧ ಮತ್ತು ಹಿಂಸಾಚಾರಗಳು ನಡೆಯುತ್ತಿರುವ ಈ ಕಾಲದಲ್ಲಿ, "ಕೊಲಬೇಡ" ಎಂಬ ಅಹಿಂಸೆಯ ತತ್ವವು ಜಾಗತಿಕ ಶಾಂತಿಗೆ ಪೂರಕವಾಗಿದೆ. ಶರಣರು ಕೇವಲ ಮನುಷ್ಯರನ್ನಷ್ಟೇ ಅಲ್ಲ, ಸರ್ವ ಜೀವರಾಶಿಗಳನ್ನು ಪ್ರೀತಿಸುವ 'ವಿಶ್ವಮಾನವ' ಸಂದೇಶವನ್ನು ಬೀರಿದರು.


ಬಸವಣ್ಣನವರು ಕೇವಲ ಒಬ್ಬ ಧಾರ್ಮಿಕ ಸುಧಾರಕರಲ್ಲ, ಅವರು ಒಬ್ಬ ಶ್ರೇಷ್ಠ ಸಮಾಜ ವಿಜ್ಞಾನಿ. ಅವರ ಆದರ್ಶಗಳನ್ನು ನಾವು ಕೇವಲ ಭಾಷಣಗಳಲ್ಲಿ ಸೀಮಿತಗೊಳಿಸದೆ, ದೈನಂದಿನ ಜೀವನದಲ್ಲಿ ಅಳವಡಿಸಿಕೊಂಡರೆ ಮಾತ್ರ ಒಂದು ಸುಂದರ, ಸಾಮರಸ್ಯದ ಸಮಾಜ ನಿರ್ಮಾಣ ಮಾಡಲು ಸಾಧ್ಯ. ಬಸವಣ್ಣನವರ ತತ್ವಗಳೇ ಈ ಕಾಲದ ಅಗತ್ಯವಾಗಿದೆ.



ಲೇಖನ
■ ಬಸಲಿಂಗಯ್ಯ ಹಿರೇಮಠ
ಶಿಕ್ಷಕರು , ಸಿಂದಗಿ
ಮೊ: 9972658355

# ಮಲೇರಿಯಾ ನಿಯಂತ್ರಣಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ

■ ಉದಯರಶ್ಮಿ ದಿನಾಚರಣೆ




ವಿಜಯಪುರ: ಸಾಂಕ್ರಾಮಿಕ ರೋಗಗಳ ಹರಡುವಿಕೆ, ನಿಯಂತ್ರಣ ಮತ್ತು ಚಿಕಿತ್ಸೆ ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿಯೊಂದಿಗೆ ಸಾರ್ವಜನಿಕರ ಸಹಕಾರ ಮುಖ್ಯವಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಡಾ.ಚನ್ನಪ್ಪ ಕಟ್ಟಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ವಿಶ್ವ ಮಲೇರಿಯಾ ದಿನದ ಅಂಗವಾಗಿ ಇತ್ತಿಚಿಗೆ ಹಮ್ಮಿಕೊಂಡಿದ್ದ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯದಲ್ಲಿ 2027ರ ವೇಳೆಗೆ ಮಲೇರಿಯಾ ನಿವಾರಣಾ ಗುರಿ ಹೊಂದಲಾಗಿದೆ. ಮಲೇ–ರಿಯಾ ರೋಗವು ಪ್ಲಾಸ್ಮೋಡಿಯಾ ಎಂಬ ಪರಾವಲಂಬಿ ಜೀವಿಯಿಂದ ಬರುತ್ತದೆ. ಅನಾಫಿಲೀಸ್ ಎಂಬ ಹೆಣ್ಣು ಸೊಳ್ಳೆ ಕಡಿತದಿಂದ ಈ ರೋಗ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ. ಈ ರೋಗ ಸಾಮಾನ್ಯವಾಗಿ ವರ್ಷದ ಎಲ್ಲ ಕಾಲದಲ್ಲೂ ಕಂಡು ಬಂದರೂ ಜೂನ್ ನಿಂದ ಅಕ್ಟೋಬರ್ ಅಂತ್ಯದವರೆಗಿನ ಮಳೆಗಾಲದಲ್ಲಿ ಹೆಚ್ಚಾಗಿ ಕಂಡುಬರುತ್ತದೆ. ಈ ಸಮಯದಲ್ಲಿ ಕೆರೆ, ಕುಂಟೆ, ಬಾವಿ, ಸಣ್ಣಪುಟ್ಟ ತಗ್ಗು ಪ್ರದೇಶದಲ್ಲಿ ಮಳೆ ನೀರು ನಿಂತು ಸೊಳ್ಳೆಗಳ ವಂಶಾಭಿವೃದ್ಧಿಗೆ ಅನುಕೂಲವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಸೊಳ್ಳೆಗಳು ಉತ್ಪತ್ತಿಯಾಗುತ್ತವೆ. ಹಾಗಾಗಿ ಗ್ರಾಮಂತರ ಮತ್ತು ಪಟ್ಟಣ ಪ್ರದೇಶಗಳ ಪರಿಸರದಲ್ಲಿ ಈ ರೋಗ ನಿಯಂತ್ರಣಕ್ಕೆ ಕ್ರಮ ಅಗತ್ಯ ಎಂದರು.

ಈ ವರ್ಷದ ಘೋಷವಾಕ್ಯದಂತೆ "ಮಲೇರಿಯಾ ಕೊನೆಗೊಳಿಸಲು ಅಗತ್ಯ ಕ್ರಮಗಳ ಚಾಲನೆಯನ್ನು ಈಗ ನಾವು ಮಾಡೋಣ ಹಾಗೂ ಮಲೇರಿಯಾ ನಿಯಂತ್ರಣಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸಂಪತ್ತಕುಮಾರ ಗುಣಾರಿ ಮಾತನಾಡಿ, ಮಲೇ–ರಿಯಾ ರೋಗದ ಖಚಿತ ಪ್ರಕರಣಗಳು ಬರದಂತೆ ನೋಡಿಕೊಳ್ಳುವುದು ತುಂಬಾ ಅಗತ್ಯವಾಗಿದೆ. ಕೆರೆ, ಬಾವಿಗಳಲ್ಲಿ ಮೀನು ಬಿಡುವುದು, ಚರಂಡಿಗಳ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಬೇಕು. ನೀರಿಗೆ ಕ್ಲೋರಿನೇಶನ್ ಮಾಡಿಸುವುದು.

ಇದರಿಂದ ಸೊಳ್ಳೆಗಳ ಉತ್ಪತಿಯನ್ನು ತಡೆಯಬಹುದು. ಮಳೆ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಬಿಟ್ಟು ಬಿಟ್ಟು ಮಳೆ ಬರುವುದರಿಂದ ಅಲ್ಲಲ್ಲಿ ನೀರು ನಿಂತು ಸೊಳ್ಳೆಗಳು ಉತ್ಪತ್ತಿಯಾಗುತ್ತದೆ. ಹಾಗಾಗಿ ನೀರು ನಿಲ್ಲದಂತೆ ಮುಂಜಾಗ್ರತಾ ಕ್ರಮವಹಿಸಬೇಕು ಎಂದರು.

ಮನೆಗಳಲ್ಲಿ ನೀರು ಶೇಖರಣೆ ಸಾಮಗ್ರಿಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಲು ಹಾಗೂ ನೀರು ತುಂಬಿಡುವ ಪರಿಕರಗಳನ್ನು ಗಾಳಿ ಆಡದಂತೆ ಭದ್ರವಾಗಿ ಮುಚ್ಚುವಂತೆ ಜಾಗೃತಿ ಮೂಡಿಸಬೇಕು ಹಾಗೂ ಆರೋಗ್ಯ ಶಿಕ್ಷಣ ನೀಡಬೇಕು ಎಂದರು.ಸ್ವಯಂ ರಕ್ಷಣೆ ವಿಧಾನಗಳಾದ ಸೊಳ್ಳೆ ಪರದೆ, ಸೊಳ್ಳೆ ಎತ್ತಿಗಳ ಉಪಯೋಗ ಮತ್ತು ಸಂಜೆ ಅಳವಡಿಸಬೇಕು. ಮನೆ ಸುತ್ತ–ಮುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.

ಜಿಲ್ಲಾ ಸರ್ವೇಕ್ಷಣಾಧಿಕಾ–ರಿಗಳು, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಅಪ್ಪಾಸಾಹೇಬ ಇನಾಂದಾರ ಮಾತನಾಡಿ, ಜ್ವರದ ಲಕ್ಷಣಗಳು ಕಂಡುಬಂದಲ್ಲಿ ಸಮೀಪದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ರಕ್ತ ಪರೀಕ್ಷೆ ಮಾಡಿಸಿಕೊಂಡು. ಚಿಕಿತ್ಸೆ ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಡಾ.ಕೆ. ಡಿ. ಗುಂಡಬಾವಡಿ, ತಾಲೂಕಾ ಆರೋಗ್ಯ ಅಧಿಕಾರಿಗಳು ವಿಜಯಪುರ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಜಿ. ಎಂ. ಕೋಲೂರ. ಜಿಲ್ಲಾ ಮೇಲ್ವಿಚಾರಣಾಧಿಕಾ–ರಿಗಳು ಮೋತಿಲಾಲ ಲಮಾಣಿ, ಬ್ಯಾಂಕಿನ ಅಧಿಕಾರಿಗಳಾದ ರಾಘವೇಂದ್ರ ಕೆ. ಪ್ರದೀಪ ನಾದ, ಶ್ರೀ ಶಿವಾನಂದ ಬೊಮ್ಮನಹಳ್ಳಿ ಜಿಲ್ಲಾ ಮೇಲ್ವಿಚಾರಕರು. ಎಲ್ಲ ನಮ್ಮ ಕ್ಲಿನಿಕ ವೈದ್ಯಾಧಿಕಾರಿಗಳು, ಡಿ.ವಿ.ಬಿ.ಡಿ.ಸಿ ಕಛೇರಿ ಸಿಬ್ಬಂದಿಗಳು, ವರ್ಸಿಂಗ್ ಕಾಲೇಜಿನ ಭೋದಕ ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಹಾಗೂ ಆಶಾ ಕಾರ್ಯಕರ್ತೆಯರು ಜಾಥಾ ಕಾರ್ಯಕ್ರಮದಲ್ಲಿ ಉಪಸ್ಥಿತ–ರಿದ್ದರು.

# ಮಲೇರಿಯಾ ಕೆಲವೊಮ್ಮೆ ಮಾರಕವಾಗಬಹುದು : ಕೋಳೆಕರ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಅನಾಫೆಲಿಸ್ ಎನ್ನುವ ಹೆಣ್ಣು ಸೊಳ್ಳೆಯಿಂದ ಮಲೇರಿಯಾ ರೋಗ ಹರಡುತ್ತದೆ. ನಿಂತ ನೀರು ಸೊಳ್ಳೆಗಳ ತವರಿನಂತಿದ್ದು, ಸೊಳ್ಳೆಗಳ ಉತ್ಪತ್ತಿ ತಡೆಗಟ್ಟಿ, ಮಲೇರಿಯಾ ನಿರ್ಮೂಲನೆ ಪ್ರತಿಯೊಬ್ಬರ ಜವಾಬ್ದಾ–ರಿಯಾಗಿದೆ. ಆದ್ದರಿಂದ ಪ್ರತಿಯೊಬ್ಬರೂ ಇಲಾಖೆಯ ಮಾರ್ಗದರ್ಶನದಲ್ಲಿ ಮುಂಜಾಗೃತ ವಹಿಸಬೇಕು ಎಂದು ತಾಲೂಕು ಆರೋಗ್ಯ ಅಧಿಕಾರಿ ರಾಜೇಶ ಕೋಳೆಕರ ಹೇಳಿದರು.

ನಗರದ ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯದಲ್ಲಿ ಹಮ್ಮಿಕೊಂಡ ವಿಶ್ವ ಮಲೇ–ರಿಯಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಮಲೇರಿಯಾ ತೀವ್ರವಾದ, ಕೆಲವೊಮ್ಮೆ ಮಾರಕವಾಗಬಹುದು. ಪ್ಲಾಸ್ಮೋಡಿಯಂ ಪರಾವಲಂಬಿಗಳು ಸಂಕೀರ್ಣ ಜೀವನ ಚಕ್ರವನ್ನು ಪಡೆದು, ಆವರ್ತಕ ಜ್ವರಗಳಿಗೆ ಕಾರಣವಾಗುತ್ತದೆ. ಹೆಚ್ಚಿನ ರೋಗಿಗಳು ಚಿಕಿತ್ಸೆಯ ನಂತರ ಮಲೇರಿಯಾ ಲಕ್ಷಣಗಳಿಂದ ಬೇಗ ಚೇತರಿಸಿಕೊಳ್ಳುತ್ತಾರೆ. ಆದರೆ, ಚಿಕಿತ್ಸೆ ವಿಳಂಬವಾದರೆ ತೀವ್ರ ರಕ್ತಹೀನತೆ, ಸೆರೆಬ್ರಲ್, ಕೋಮಾ ಅಥವಾ ಸಾವೂ ಸಂಭವವಿದೆ ಎಂದು ತಿಳಿಸಿದರು.

ತಾಲೂಕಾ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸುನಂದಾ ಅಂಬಲಗಿ ಮಾತನಾಡಿ, ಜ್ವರದ ಲಕ್ಷಣಗಳಿದ್ದರೆ ರಕ್ತ ಪರೀಕ್ಷೆ ಮಾಡಿಸಿ, ಸಂಪೂರ್ಣ ಚಿಕಿತ್ಸೆ ಪಡೆಯಿರಿ. ಮನೆಯ ಸುತ್ತ ಮುತ್ತ ನೀರು ನಿಲ್ಲದಂತೆ ಎಚ್ಚರ ವಹಿಸಬೇಕು. ಸೊಳ್ಳೆ ಪರದೆ ಬಳಸಿ ಮತ್ತು ನಮ್ಮ ಇಲಾಖೆಯ ಸಹಯೋಗದಲ್ಲಿ ಅವಶ್ಯಕ ಮುಂಜಾಗೃತ ವಹಿಸಬೇಕು ಎಂದು ಹೇಳಿದರು.

ತಾಲೂಕಾ ಆರೋಗ್ಯ ಕಾರ್ಯಾಲಯದಿಂದ ಆರಂಭವಾಗಿ ನಗರದ ಮುಖ್ಯರಸ್ತೆಗಳ ಮೂಲಕ ತಲೂಕಾ ಸಾರ್ವಜನಿಕ ಆಸ್ಪತ್ರೆ ಆವರಣದವರೆಗೆ ಜಾಗೃತಿ ಜಾಥಾ ಜರುಗಿತು.




ವಿಶ್ವನಾಥ ತೆನಿಹಳ್ಳಿ, ಆರ್.ಬಿ.ಎಸ್.ಕೆ ವೈದ್ಯಾಧಿಕಾ–ರಿಗಳು, ತಾಲೂಕಾ ಆಶಾ ಮೆಂಟರ್, ನಮ್ಮ ಕ್ಲಿನಿಕ್ ನಿರೀಕ್ಷಣಾಧಿಕಾರಿಗಳು, ಶಾಂತೇಶ್ವರ ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳು, ಆಶಾ ಕಾರ್ಯಕರ್ತೆಯರು ಇದ್ದರು.

# ಮೇ 4 ರಿಂದ ನೆನಪಿನ ಶಕ್ತಿ ಸಮಸ್ಯೆ ಕುರಿತು ಉಚಿತ ಚಿತ್ಸಾ ಶಿಬಿರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ:ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್ ಆಯುರ್ವೇದ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನ ಕೇಂದ್ರದ ಕಾಯಚಿಕಿತ್ಸೆ ವಿಭಾಗದ ವತಿಯಿಂದ ಮೇ 4 ರಿಂದ ಮೇ 9ರ ವರೆಗೆ ಸೋಮವಾರದಿಂದ ಶನಿವಾರದ ವರೆಗೆ ಹಿರಿಯ ನಾಗರಿಕರಲ್ಲಿ ಕಂಡುಬರುವ ವಯೋಸಹಜವಾದ ನೆನಪಿನ ಶಕ್ತಿ ಸಮಸ್ಯೆ ಕುರಿತು ಉಚಿತ ತಪಾಸಣೆ ಮತ್ತು ಚಿಕಿತ್ಸೆ ಶಿಬಿರ ನಡೆಯಲಿದೆ.

ಈ ಶಿಬಿರದಲ್ಲಿ ನೆನೆಪಿನ ಶಕ್ತಿ ಕ್ಷೀಣಿಸುವಿಕೆ, ಆಲೋಚನೆ ಮತ್ತು ನಿರ್ಧಾರದ ಸಮಸ್ಯೆ, ಸ್ಥಳ ಮತ್ತು ಸಮಯದ ಅರಿವು ಕಡಿಮೆಯಾಗುವುದು, ವರ್ತನೆ ಮತ್ತು ಮನಸ್ಥಿತಿಯಲ್ಲಿನ ಬದಲಾವಣೆ ಸಮಸ್ಯೆ ಎದುರಿಸುತ್ತಿರುವ 60 ರಿಂದ 75 ವರ್ಷದೊಳಗಿನ ಹಿರಿಯ ನಾಗರಿಕರು ಚಿಕಿತ್ಸೆ ಪಡೆಯಬಹುದಾಗಿದೆ.

ಇಂಥ ಸಮಸ್ಯೆ ಎದುರಿಸುತ್ತಿರುವ ಸಾರ್ವಜನಿಕರು ಈ ಶಿಬಿರದ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್ ಆಯುರ್ವೇದ ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಸಂಜಯ ಕಡ್ಲಿಮಟ್ಟಿ ಅವರು ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಆಸ್ಪತ್ರೆಯ ಮೊಬೈಲ್ ಸಂಖ್ಯೆ– 9513397413 ಸಂಪರ್ಕಿಸಬಹುದಾಗಿದೆ.

# ಹಡಪದ ಸಮಾಜದ ಮಕ್ಕಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಹಡಪದ ನೌಕರರ ಸಂಘ ಬೆಂಗಳೂರು. ವಿಜಯಪುರ ಜಿಲ್ಲಾ ಘಟಕದ ನೇತೃತ್ವದಲ್ಲಿ 2025–26ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ. 80 ರ ಮೇಲೆ ಅಂಕ ಗಳಿಸಿದ ಹಡಪದ ಸಮಾಜದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಸನ್ಮಾನ ಮಾಡಲು ಕರ್ನಾಟಕ ರಾಜ್ಯ ಹಡಪದ ನೌಕರರ ಸಂಘ ವಿಜಯಪುರ ಜಿಲ್ಲಾ ಘಟಕ ನಿರ್ಧರಿಸಿದೆ.ಈ ನಿಟ್ಟಿನಲ್ಲಿ ಶೇ. 80 ರ ಮೇಲೆ ಅಂಕ ಗಳಿಸಿದ ಮಕ್ಕಳು ಅರ್ಜಿ ನಮೂನೆ ಭರ್ತಿಮಾಡಿ, ಅಂಕ ಪಟ್ಟಿ (ಮಾರ್ಕ್ಸ್ ಕಾರ್ಡ್), ಆಧಾರ ಕಾರ್ಡ್ ಇತ್ತೀಚಿನ 1 ಭಾವಚಿತ್ರ (ಫೋಟೋ) ಗಳನ್ನು ಶ್ರೀ ಮಂಜುನಾಥ ಕೃಪಾ ನಿವಾಸ, ಏಕತಾ ನಗರ , ಸಾಯಿ ಪಾರ್ಕ ರಸ್ತೆ, ವಿಜಯಪುರ – 586109 ಈ ವಿಳಾಸಕ್ಕೆ ಅಂಚೆ ಮೂಲಕ ಅಥವಾ ನೌಖರರ ಸಂಘದ ಜಿಲ್ಲಾಧ್ಯಕ್ಷರಿಗೆ ನೇರವಾಗಿ ಮೇ 20 ನೇ ತಾರಿಖಿನೊಳಗಾಗಿ ತಲುಪಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ (ಮೊ: 9986091374) ಸಂಖ್ಯೆಗೆ ಸಂಪರ್ಕಿಸಬೇಕೆಂದು ಕರ್ನಾಟಕ ರಾಜ್ಯ ಹಡಪದ ನೌಕರರ ಸಂಘದ ಜಿಲ್ಲಾಧ್ಯಕ್ಷ ಶ್ರೀ ದಶರಥ ನಾವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ತಿಕೋಟಾ ಪಟ್ಟಣದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಐಟಿಐ ಯಲ್ಲಿ 2026–27ನೇ ಸಾಲಿನ ಪ್ರವೇಶಾವಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಎರಡು ವರ್ಷದ ಎಲೆಕ್ಟ್ರಿಷಿಯನ್, ಫಿಟ್ಟರ್, ವೃತ್ತಿಗಳಲ್ಲಿ ಪ್ರವೇಶ ಪಡೆಯಲು ಏ.27 ರಿಂದ ಅರ್ಜಿ ಪ್ರಕ್ರಿಯೆ ಪ್ರಾರಂಭವಾಗಿದ್ದು, 08–04–2026 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದೆ. ಟಾಟಾ ಯೋಜನೆ ಅಡಿಯಲ್ಲಿ ಮೆಕ್ಯಾನಿಕ್ ಎಲೆಕ್ಟ್ರಿಕ್ ವಾಹನ, ಇಂಡಸ್ಟ್ರಿಯಲ್ ರೊಬೋಟಿಕ್ ಡಿಸೈನಿಂಗ್ ಅಂಡ್ ಮ್ಯಾನುಫ್ಯಾಕ್ಚರಿಂಗ್, ಸಿಎನ್‌ಸಿ ಮ್ಯಾನುಫ್ಯಾಕ್ಚರಿಂಗ್ ಪ್ರೊಸೆಸ್, ಆಟೋನಾಮಸ್, ವರ್ಚುವಲ್ ಅನಾಲಿಸಿಸ್ ಅಂಡ್ ಡಿಸೈನರ್ ಹಾಗೂ ಎಂಜಿನಿಯರಿಂಗ್ ಡಿಸೈನ್ ಟೆಕ್ನಿಷಿಯನ್ ಸೇರಿದಂತೆ ಒಟ್ಟು 06 ವೃತ್ತಿಗಳಲ್ಲೂ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ತಿತಿತಿ.ಜಟರಿಣಡಿರ.ಞಚಿಡಿ.ಟುಥಿ.ಏಟಿ ಹಾಗೂ ತಿತಿತಿ.ಜಜಣಞಚಿಡಿಟಚಿಣಚಿಞಚಿ.ಠಡಿರ.ಏಟಿ ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಫೋ ಸಂಖ್ಯೆ: 9449501663, 9739985422, 9886247718, 9902109750. ಮೂಲಕ ಸಂಪರ್ಕಿಸಬಹುದು ಎಂದು ಸರ್ಕಾರಿ ಕೈಗರಿಕಾ ತರಬೇತಿ ಸಂಸ್ಥೆ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿನಿಯರಿಗೆ ಉಚಿತ ವಸತಿ ಸೌಲಭ್ಯಕ್ಕೆ ಅರ್ಜಿಗಳ ಆಹ್ವಾನ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026–27ನೇ ಶೈಕ್ಷಣಿಕ ಸಾಲಿಗೆ ಗ್ರಾಮೀಣ ವಿದ್ಯಾರ್ಥಿನಿಯರಿಗಾಗಿ ನಗರದಲ್ಲಿ ಉಚಿತ ವಸತಿ ಸೌಲಭ್ಯಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕರ್ನಾಟಕ ಸರ್ಕಾರದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅನುದಾನದಲ್ಲಿ ವಿಜಯಪುರದ ಶ್ರೀ ಶರಣ ಜ್ಯೋತಿ ವಿದ್ಯಾ ಸಂಸ್ಥೆಯ ಗ್ರಾಮೀಣ ಬಾಲಕಿಯರ ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯ–ರಿಗೆ ಉಚಿತವಾಗಿ ಊಟ ಮತ್ತು ವಸತಿ ಸೌಲಭ್ಯ ಕಲ್ಪಿಸಲಾಗುತ್ತಿದೆ.

ಪದವಿ ಪೂರ್ವ ಹಾಗೂ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ ಮಾತ್ರ ಇಲ್ಲಿ ಅವಕಾಶವಿದೆ.

ಮೇ.4 ರಿಂದ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಅರ್ಜಿ ಸಲ್ಲಿಸಲು ಜೂನ್ 10 ಕೊನೆಯ ದಿನವಾಗಿದೆ.

ಅರ್ಜಿಗಳನ್ನು ಶ್ರೀ ಶರಣ ಜ್ಯೋತಿ ವಿದ್ಯಾ ಸಂಸ್ಥೆ, ಬಿಡಿಎ ಕ್ರಾಸ್, ಮನಖಾದ್ರಿ ದರ್ಗಾ ಹತ್ತಿರ, ಕೆ.ಕೆ. ಕಾಲೋನಿ, ವಿಜಯಪುರ ಇಲ್ಲಿ ಪಡೆಯಬಹುದು ಎಂದು ವಸತಿ ನಿಲಯ ಅಧಿಕ್ಷಕಿ ವಿಜಯಲಕ್ಷ್ಮಿ ಎಂ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತ ವಿದ್ಯಾರ್ಥಿನಿಯರು ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8660626216 ಮತ್ತು 8123478500 ಸಂಖ್ಯೆಗಳಿಗೆ ಸಂಪರ್ಕಿಸಬಹುದು.

# ಶಿವಾನಂದ ಪಟ್ಟಣಶೆಟ್ಟಿ ಅವರಿಗೆ "ಕಾಯಕಯೋಗಿ ಪ್ರಶಸ್ತಿ"

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಗದಗ ತೋಂಟದಾರ್ಯ ವಿದ್ಯಾಪೀಠದ ಮಹಾ ಪ್ರಧಾನ ಕಾರ್ಯದರ್ಶಿಗಳಾದ ಶಿವಾನಂದ ಎಸ್. ಪಟ್ಟಣಶೆಟ್ಟಿ ಅವರು 2026 ನೇ ಸಾಲಿನ "ಕಾಯಕಯೋಗಿ ಪ್ರಶಸ್ತಿ"ಗೆ ಭಾಜನರಾಗಿದ್ದಾರೆ.

ದೊಡ್ಡಬಳ್ಳಾಪುರ ದ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ಕೊಡಮಾಡುವ "ಕಾಯಕಯೋಗಿ ಪ್ರಶಸ್ತಿ" ಯನ್ನು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಿವಾನಂದ ಎಸ್. ಪಟ್ಟಣಶೆಟ್ಟಿ ಅವರಿಗೆ ಪ್ರದಾನ ಮಾಡಲಾಗುವುದು ಎಂದು ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಭಿನಂದನೆ**

"ಕಾಯಕಯೋಗಿ ಪ್ರಶಸ್ತಿ"ಗೆ ಭಾಜನರಾದ ಶಿವಾನಂದ ಎಸ್. ಪಟ್ಟಣಶೆಟ್ಟಿ ಅವರಿಗೆ ಸಿಂದಗಿಯ ಜಗದೀಶ ಕಲಬುರ್ಗಿ ಹಾಗೂ ಕಲಬುರ್ಗಿ ಪರಿವಾರ ಅಭಿನಂದಿಸಿ ಶುಭ ಕೋರಿದ್ದಾರೆ.

# ನೇಮಕ



■ ಉದಯರಶ್ಮಿ ದಿನಪತ್ರಿಕೆ

ಚಿಮ್ಮಡ: ತಾಲೂಕಾ ಪಂಚಾಯತಿ ಮಾಜಿ ಉಪಾಧ್ಯಕ್ಷ, ಗ್ರಾಮದ ಪ್ರಭು ಮುಧೋಳ ಅವರನ್ನು ಬಾಗಲಕೋಟ ಜಿಲ್ಲಾ ಭಾರತೀಯ ಜನತಾ ಪಾರ್ಟಿ ಹಿಂದುಳಿದ ವರ್ಗಗಳ (ಓಬಿಸಿ ಮೋರ್ಚಾ) ಜಿಲ್ಲಾ ಉಪಾಧ್ಯಕ್ಷರನ್ನಾಗಿ ನೇಮಕಗೊಳಿಸಿ ಆದೇಶಿಸಲಾಗಿದೆ ಎಂದು ಓಬಿಸಿ ಮೋರ್ಚಾ ಜಿಲ್ಲಾಧ್ಯಕ್ಷ ಸಂಗಮೇಶ ದಳವಾಯಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಂಬರುವ ಮಹನೀಯರ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಿ: ಜಿಲ್ಲಾಧಿಕಾರಿ

■ ಉದಯರಶ್ಮಿ ದಿನಪತ್ರಿಕೆ



ಬೀದರ: ಭಗವಾನ್ ಬುದ್ಧ ಜಯಂತಿ ಹಾಗೂ ಮೇ.10 ರಂದು ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಅದ್ದೂ–ರಿಯಾಗಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 2026ನೇ ಮೇ.1 ರಂದು ಭಗವಾನ್ ಬುದ್ಧ ಜಯಂತಿ ಹಾಗೂ ಮೇ.10 ರಂದು ಹೇಮರೆಡ್ಡಿ ಮಲ್ಲಮ್ಮ ಜಯಂತಿಗಳ ಆಚರಣೆ ಕುರಿತು ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮೇ.1 ರಂದು ಬೆಳಿಗ್ಗೆ 9:30 ಗಂಟೆಗೆ ಜಿಲ್ಲಾಧಿಕಾ–ರಿಗಳ ಕಚೇರಿಯಲ್ಲಿ ಭಗವಾನ್ ಬುದ್ಧ ಜಯಂತಿಯನ್ನು ಆಚರಿಸಿ ನಂತರ ಸಾಯಂಕಾಲ 5 ಗಂಟೆಗೆ ಬೀದರ ನಗರದ ಗಾಂಧಿ ಗಂಜ್ ಬುದ್ಧ ವಿಹಾರದಿಂದ ಮೆರವಣಿಗೆ ಚಾಲನೆ ನೀಡಿ ಮಹಾತ್ಮ ಬೊಮ್ಮಗೊಂಡೇಶ್ವರ ವೃತ್ತ, ವಿಶ್ವ ಗುರು ಬಸವೇಶ್ವರ ವೃತ್ತ, ಭಗತಸಿಂಗ್ ವೃತ್ತ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ವೃತ್ತದ ಮಾರ್ಗದಿಂದ ನೇರವಾಗಿ ಪೂಜ್ಯ ಚನ್ನಬಸವ ಪಟ್ಟದೇವರು ರಂಗಮಂದಿರ ತಲುಪಿ ನಂತರ ವೇದಿಕೆ ಕಾರ್ಯಕ್ರಮ ಜರುಗಲಿದೆ ಎಂದರು.

ಮೇ.10 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾ–ರಿಗಳ ಕಚೇರಿಯಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಿಸಿ ನಂತರ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಸಮುದಾಯ ಭವನದಲ್ಲಿ ಮಧ್ಯಾಹ್ನ 12 ಗಂಟೆಗೆ ವೇದಿಕೆ ಕಾರ್ಯಕ್ರಮ ಜರುಗಲಿದೆ. ಕನ್ನಡ ಸಂಸ್ಕೃತಿ ಇಲಾಖೆ ವತಿಯಿಂದ ಕಲಾ ತಂಡಗಳ ವ್ಯವಸ್ಥೆ, ನಗರಸಭೆ ವತಿಯಿಂದ ಎಲ್ಲ ಮಹನೀಯರ ವೃತ್ತಗಳ ಮೇಲೆ ದೀಪಾಲಂಕಾರ, ಕುಡಿಯುವ ನೀರಿನ ವ್ಯವಸ್ಥೆ, ಪ್ರಮುಖ ವೃತ್ತಗಳ ಸ್ವಚ್ಛತೆ ಮಾಡುವುದು, ಪೊಲೀಸ್ ಇಲಾಖೆ ವತಿಯಿಂದ ಮೆರವಣಿಗೆ ಹೋಗುವ ಮಾರ್ಗದಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ ಮಾಡುವಂತೆ ಅಪರ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಭೆಯಲ್ಲಿ ಕನ್ನಡ ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಶಿಂಧೆ, ಪೂಜ್ಯ ಭಂತೆ ಧರ್ಮಪಾಲ, ರಾಜಪ್ಪಾ ಗೂನ್ನಳ್ಳಿಕರ್, ಮಾರುತಿ ಬೌದ್ಧೆ, ಬಾಬು ಪಾಸ್ವಾನ , ಮಹೇಶ ಗೋರನಾಳಕರ್, ಶ್ರೀಪತಿರಾವ ದಿನೆ, ಡಾ.ಕಾಶಿನಾಥ ಚೆಲ್ವಾ, ಫರ್ನಾಂಡೀಸ್ ಹಿಪ್ಪಳಗಾಂವ, ಬಾಬು ಆಣದೂರ, ಶರಣು ಫುಲೆ, ಪೂಜ್ಯ ಭಂತೆ ಭದಂತ ಧಮ್ಮನಾಗ ಮಹಾಥೆರೋರೊ, ಶಂಕರ ರೆಡ್ಡಿ ಸೇರಿದಂತೆ ಸಮಾಜದ ಎಲ್ಲಾ ಮುಖಂಡರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಲ್ಲಾ ಗ್ರಾಮಗಳಲ್ಲಿ ಸಮಗ್ರ ಅಭಿವೃದ್ಧಿ ಸಾಧಿಸುವುದು ನನ್ನ ಉದ್ದೇಶ ಡಾ. ಶೈಲೇಂದ್ರ ಬೆಲ್ದಾಳೆ

■ ಉದಯರಶ್ಮಿ ದಿನಪತ್ರಿಕೆ



ಬೀದರ್:ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ರಸ್ತೆ ವ್ಯವಸ್ಥೆ ಅತ್ಯಂತ ಪ್ರಮುಖವಾದ ಮೂಲಸೌಕರ್ಯ. ಒಳ್ಳೆಯ ರಸ್ತೆ ಇದ್ದರೆ ಜನರ ಸಂಚಾರ ಸುಗಮವಾಗುತ್ತದೆ, ರೈತರು ತಮ್ಮ ಉತ್ಪನ್ನಗಳನ್ನು ಸುಲಭವಾಗಿ ಮಾರುಕಟ್ಟೆಗೆ ತಲುಪಿಸಬಹುದು, ವಿದ್ಯಾರ್ಥಿಗಳಿಗೆ ಶಾಲೆ–ಕಾಲೇಜುಗಳಿಗೆ ಹೋಗುವುದು ಸುಲಭವಾಗುತ್ತದೆ, ತುರ್ತು ಪರಿಸ್ಥಿತಿಯಲ್ಲಿ ಆಸ್ಪತ್ರೆಗೆ ತಲುಪುವುದೂ ವೇಗವಾಗಿ ಸಾಧ್ಯವಾಗುತ್ತದೆ ಹೀಗಾಗಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಹೆಚ್ಚಿನ ಆದ–್ಯತೆ ನೀಡಲಾಗುತ್ತಿದೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಯದಲಾಪುರ ಹಾಗೂ ಐಯಸಪುರ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ?1 ಕೋಟಿ 20 ಲಕ್ಷ ವೆಚ್ಚದ ರಸ್ತೆ ಡಾಂಬರೀಕರಣ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಇಂದು ನಾವು ಆರಂಭಿಸಿರುವ ಈ ರಸ್ತೆ ಕಾಮಗಾ–ರಿಯು ಕೇವಲ ರಸ್ತೆ ನಿರ್ಮಾಣವಲ್ಲ ಇದು ನಮ್ಮ ಗ್ರಾಮಗಳ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ದಾರಿತೋರುವ ಮಹತ್ವದ ಹೆಜ್ಜೆ. ಈ ರಸ್ತೆ ನಿರ್ಮಾಣದಿಂದ ಯದಲಾಪುರ ಮತ್ತು ಐಯಸಪುರ ಗ್ರಾಮಗಳ ನಡುವಿನ ಸಂಪರ್ಕ ಬಲವಾಗುತ್ತದೆ ಮತ್ತು ಸುತ್ತಮುತ್ತಲಿನ ಗ್ರಾಮಗಳಿಗೂ ಇದರ ಪ್ರಯೋಜನ ದೊರೆಯಲಿದೆ ಎಂದರು.

ಮೂಲಸೌಕರ್ಯ, ಕುಡಿಯುವ ನೀರು, ವಿದ್ಯುತ್, ಶಿಕ್ಷಣ, ಆರೋಗ್ಯ ಈ ಎಲ್ಲಾ ಗ್ರಾಮಗಳಲ್ಲಿ ಸಮಗ್ರ ಅಭಿವೃದ್ಧಿ ಸಾಧಿಸುವುದು ನನ್ನ ಉದ್ದೇಶವಾಗಿದೆ. ಜನರ ಜೀವನಮಟ್ಟವನ್ನು ಉತ್ತಮಗೊಳಿಸುವುದೇ ನಮ್ಮ ಧ್ಯೇಯವಾಗಿದೆ. ಇದಕ್ಕಾಗಿ ಕಾಮಗಾರಿಯನ್ನು ಗುಣಮಟ್ಟದೊಂದಿಗೆ ಹಾಗೂ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ಕಟ್ಟುನಿಟ್ಟಾಗಿ ಸೂಚನೆಗಳನ್ನು ನೀಡಲಾಗಿದೆ. ಯಾವುದೇ ರೀತಿಯ ನಿರ್ಲಕ್ಷ್ಯ ಅಥವಾ ಗುಣಮಟ್ಟದಲ್ಲಿ ತೊಂದರೆ ಕಂಡುಬಂದರೆ ಅದನ್ನು ಸಹಿಸಲಾಗುವುದಿಲ್ಲ. ಜನರ ಹಣದಿಂದ ನಡೆಯುವ ಈ ಕಾಮಗಾರಿಗಳು ಜನರಿಗೆ ಉತ್ತಮ ಸೇವೆ ನೀಡಬೇಕು ಎಂಬುದು ನಮ್ಮ ದೃಢ ನಿಲುವು.

ನಾನು ಈ ಸಂದರ್ಭದಲ್ಲಿ ಸ್ಥಳೀಯ ಜನರಿಗೆ ಸಹ ಒಂದು ವಿನಂತಿ ಮಾಡುತ್ತೇನೆ ಈ ಕಾಮಗಾರಿಯ ಮೇಲೆ ನಿಮ್ಮ ಗಮನ ಇರಲಿ, ಗುಣಮಟ್ಟ ಕಾಪಾಡಲು ಸಹಕ–ರಿಸಿ,ನಿಮ್ಮ ಸಹಕಾರದಿಂದಲೇ ಉತ್ತಮ ಅಭಿವೃದ್ಧಿ ಸಾಧ್ಯ.

ನನ್ನ ಉದ್ದೇಶ ಸ್ಪಷ್ಟ ಗ್ರಾಮಗಳ ಅಭಿವೃದ್ಧಿ ನಮ್ಮ ಪ್ರಾಥಮಿಕ ಗುರಿ, ಜನಸೇವೆಯೇ ನಮ್ಮ ಧ್ಯೇಯ. ಇದೇ ಧ್ಯೇಯದೊಂದಿಗೆ ನಾವು ಇನ್ನಷ್ಟು ಅಭಿವೃದ್ಧಿ ಕಾರ್ಯಗಳನ್ನು ನಿಮ್ಮ ಮುಂದೆ ತರಲು ಬದ್ಧರಾಗಿದ್ದೇನೆ ಎಂದರು.ಈ ಸಂದರ್ಭದಲ್ಲಿ ಶಿವರಾಜ ಪಾಟೀಲ, ಗುಣವಂತರಾವ ಪಾಟೀಲ, ಕುಶಲ ಯಾಬಾ, ಬಸವರಾಜ ಕ್ಯಾಸಾ, ಉಮೇಶ ಯಾಬಾ, ಸತೀಶ್ ಯಾಬಾ, ಚಂದು ಮಡಕಿ, ಸೂರ್ಯಕಾಂತ ಯಕಾತಪುರೆ, ಜಗನ್ನಾಥ ಯಕಾತಪುರ,ಶಿವಕುಮಾರ ನಾಗಲಗಿದ್ದಿ, ಶಿವಾನಂದ ಚಿಟ್ಟನಳ್ಳಿ, ಅಂಬರೀಷ್ ಬೀರಾದರ, ಶಿವಾನಂದ ಚಿಟ್ಟನಳ್ಳಿ, ದತ್ತು ಹಡಪದ, ಅಶೋಕ ಬಂಡೆ, ಅಶೋಕ, ಬಸವರಾಜ ಸೋರಳ ಮತ್ತಿತರರು ಉಪಸ್ಥಿತರಿದ್ದರು.

# ಮಾಳೆಗಾಂವನಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಆರೋಗ್ಯ ಕೇಂದ್ರ:ಸಚಿವ ರಹೀಂ ಖಾನ್

■ ಉದಯರಶ್ಮಿ ದಿನಪತ್ರಿಕೆ



ಬೀದರ: ಮಾಳೆಗಾಂವ ಹಾಗೂ ಸುತ್ತಲಿನ ಗ್ರಾಮಗಳ ಜನರಿಗೆ ಅನುಕೂಲವಾಗುವ ದೃಷ್ಟಿಯಿಂದ ಮಾಳೆಗಾಂವನಲ್ಲಿ 5 ಕೋಟಿ ರೂ. ವೆಚ್ಚದಲ್ಲಿ ಆಸ್ಪತ್ರೆ ನಿರ್ಮಿಸಲಾಗುವುದು ಎಂದು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ತಿಳಿಸಿದರು.

ಅವರು ಇಂದು ಬೀದರ ತಾಲ್ಲೂಕಿನ ಮಾಳೆಗಾಂವನಲ್ಲಿ ಜರುಗಿದ ಜನಸ್ಪಂದನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬಹುದಿನಗಳಿಂದ ಮಾಳೆಗಾಂವನಲ್ಲಿ ಆಸ್ಪತ್ರೆಯ ಬೇಡಿಕೆ ಇತ್ತು, ಗ್ರಾಮದಲ್ಲಿ ಈಗಾಗಲೇ ಆಸ್ಪತ್ರೆಗೆ ಭೂಮಿ ಮಂಜೂರಾಗಿದ್ದು, 5 ಕೋಟಿ ರೂ. ಅನುದಾನವು ಸಹ ಬಿಡುಗಡೆಯಾಗಿದೆ. 2 ತಿಂಗಳಲ್ಲಿ ಕಾಮಗಾರಿ ಆರಂಭಿಸಲಾಗುತ್ತದೆ ಎಂದು ಸಚಿವ ರಹೀಂ ಖಾನ್ ತಿಳಿಸಿದರು.

ಸರಕಾರವು ಜನರ ಸಮಸ್ಯೆಗಳನ್ನು ಆಲಿಸಿ ಇತ್ಯಥ–್ಯಪಡಿಸಲು ಜಿಲ್ಲಾಡಳಿತವೇ ಗ್ರಾಮಸ್ಥರ ಬಳಿ ತೆರಳುತ್ತಿದೆ, ಜನಸಾಮಾನ್ಯರ ಅಹವಾಲುಗಳನ್ನು ಸ್ಥಳದಲ್ಲೇ ಇತ್ಯಥ–್ಯಪಡಿಸಲಾಗುವುದೆಂದು ಅವರು ತಿಳಿಸಿದರು.

ಚಿಲ್ಲರ್ಗಿ ಸುತ್ತಲಿನ ಹಲವಾರು ಗ್ರಾಮಗಳ ರಸ್ತೆ ಹಾಗೂ ಸೇತುವೆ ಕಾಮಗಾರಿ ಆರಂಭಿಸಲಾಗಿದೆ. ವಿವಿಧ ಗ್ರಾಮಗಳ ರಸ್ತೆ ನಿರ್ಮಾಣಕ್ಕೆ 16 ಕೋಟಿ ರೂ. ಬಿಡುಗಡೆ ಮಾಡಲಾಗಿದೆಯೆಂದು ಸಚಿವರು ತಿಳಿಸಿದರು.

ನಮ್ಮ ಹೊಲ ನಮ್ಮ ದಾರಿ ಯೋಜನೆಯಡಿ ಸಾಕಷ್ಟು ರೈತರು ತಮ್ಮ ಹೊಲಗಳಿಗೆ ದಾರಿ ಮಾಡಿಕೊಡುವಂತೆ ಮನವಿ ಸಲ್ಲಿಸಿದ್ದಾರೆ. ಈ ಎಲ್ಲ ಹೊಲಗಳನ್ನು ಪರಿಶೀಲಿಸಿ ದಾರಿ ಮಾಡಿಕೊಡಲಾಗುವುದೆಂದರು.

ಬೀದರ ನಗರ ಅಭಿವೃದ್ಧಿಗೆ 500 ಕೋಟಿ ರೂ. ಅನುದಾನ ತರಲಾಗಿದೆ. ನಗರ ಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮಾಡಿ ಈಗಾಗಲೇ 200 ಕೋಟಿ ರೂ. ಅನದಾನ ನೀಡಲಾಗಿದೆ. 50 ಕೋಟಿ ರೂ. ವೆಚ್ಚಲದಲಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಿಸಲಾಗುವುದು. 40 ಕೋಟಿ ರೂ. ವೆಚ್ಚದಲ್ಲಿ ಮಕ್ಕಳ ಆಸ್ಪತ್ರೆ ನಿರ್ಮಿಸಲಾಗುವುದೆಂದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಜನಸ್ಪಂದನಲ್ಲಿ ಸ್ವೀಕರಿಸಲಾದ ಎಲ್ಲ ಅರ್ಜಿಗಳನ್ನು ಪರಿಶೀಲಿಸಿ ಇತ್ಯರ್ಥಪಡಿಸಲಾಗುವುದು. ರಸ್ತೆ, ಚರಂಡಿ, ಹೊಲಕ್ಕೆ ದಾರಿ, ನೀರಿನ ಸಮಸ್ಯೆ, ನೀರಿನ ಟ್ಯಾಂಕ್ ನಿರ್ಮಾಣ ಸೇರಿದಂತೆ ಹಲವು ಅರ್ಜಿಗಳನ್ನು ಸ್ವೀಕೃತವಾಗಿವೆ ಎಂದರು. ಗ್ರಾಮ ಮಟ್ಟದ ಅಧಿಕಾರಿಗಳು ಸ್ಥಳೀಯ ಸಮಸ್ಯೆಗಳನ್ನು ತಮ್ಮ ಹಂತದಲ್ಲಿಯೇ ಇತ್ಯಥ–್ಯಗೊಳಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಶರಣಬಸಪ್ಪಾ ಕೋಟೆಪ್ಪಗೋಳ, ಬೀದರ ಉಪ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ, ಸಹಾಯಕ ಆಯುಕ್ತರಾದ ಮಹಮ್ಮದ ಶಕೀಲ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಬೀದರ ಜಿಲ್ಲೆಯು ಮಲೇರಿಯಾ ಮುಕ್ತದೆಡೆಗೆ ಸಾಗಿದೆ:ಡಾ.ರಾಜಶೇಖರ ಪಾಟೀಲ

■ ಉದಯರಶ್ಮಿ ದಿನಪತ್ರಿಕೆ



ಬೀದರ: ಬೀದರ ಜಿಲ್ಲೆಯು ಮಲೇರಿಯಾ ಮುಕ್ತದೆಡೆಗೆ ಸಾಗಿದೆ ಎಂದು ಬೀದರ ಜಿಲ್ಲಾ ರೋಗವಹಾಕ ಆಸ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ರಾಜಶೇಖರ ಪಾಟೀಲ್ ತಿಳಿಸಿದರು. ಅವರು ಮಂಗಳವಾರ ವಿಶ್ವ ಮಲೇ–ರಿಯಾ ದಿನಾಚರಣೆ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಿಂದ ಶಾಲಾ–ಕಾಲೇಜು ವಿದ್ಯಾರ್ಥಿಗಳಿಂದ ಹಮ್ಮಿಕೊಂಡಿದ್ದ ಬೃಹತ್ ಜನಜಾಗೃತಿ ರ‍್ಯಾಲಿಗೆ ರಿಬ್ಬಿನ ಕತ್ತರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಮಲೇರಿಯಾ ರೋಗವು ಇಳಿಮುಖವಾಗಿದ್ದು, ಕಳೆದ 2025ನೇ ಸಾಲಿನಲ್ಲಿ ಕೇವಲ 05 ಮಲೇರಿಯಾ ಪ್ರಕರಣಗಳು ಪತ್ತೆಯಾಗಿದ್ದು, ಅವು ಹೊರರಾಜ್ಯಗಳಿಂದ 05 ಜನ ವಲಸಿಗರಿಗೆ ಮಲೇ–ರಿಯಾ ಧೃಡಪಟ್ಟಿದ್ದು, ಎಲ್ಲಾ ಮಲೇರಿಯಾ ಪ್ರಕರಣಗಳಿಗೆ ತೀವ್ರಚಿಕಿತ್ಸೆ ನೀಡುವುದರ ಮೂಲಕ ಗುಣಪಡಿಸಲಾಗಿದೆ. ಜಿಲ್ಲೆಯಲ್ಲಿ ಮಲೇರಿಯಾದಿಂದ ಇಲ್ಲಿಯವರೆಗೆ ಯಾವುದೇ ಸಾವು ಸಂಭವಿಸಿರುವುದಿಲ್ಲ ಎಂದು ತಿಳಿಸಿದರು. ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಶಂಕ್ರೆಪ್ಪಾ ಬೋಮಾ ಮಾತನಾಡಿ, ಜಿಲ್ಲೆಯಲ್ಲಿ ಅಲ್ಲಲ್ಲಿ ಮಳೆಯಾಗುತ್ತಿರುವ್ಯದರಿಂದ ಹಾಗೂ ನಿಂತ ನೀರಿನಲ್ಲಿ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿರುತ್ತದೆ ನಾಗರಿಕರು ಮಲೇರಿಯ ರೋಗವನ್ನು ನಿಯಂತ್ರಿಸಲು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಿ ಸೊಳ್ಳೆ ಉತ್ಪತ್ತಿ ತಾಣಗಳ ನಿರ್ಮೂಲನೆ ಮತ್ತು ಸೊಳ್ಳೆ ಕಡಿತದಿಂದ ರಕ್ಷಣೆ ಮಾಡಿಕೊಳ್ಳುವದು, ಸೊಳ್ಳೆ ನಿಯಂತ್ರಣ ವಿಧಾನಗಳನ್ನು ಅಳವಡಿಸಿಕೊಂಡು ಸೊಳ್ಳೆಗಳಿಂದ ಹರಡುವ ರೋಗಗಳನ್ನು ತಡೆಗಟ್ಟಲು ಸಾರ್ವಜನಿಕರಲ್ಲಿ ಮನವಿ ಮಾಡುತ್ತಾ ಮಲೇ–ರಿಯಾರೋಗ ಲಕ್ಷಣಗಳು ಕಂಡುಬಂದಲ್ಲಿ ತಮ್ಮ ಸಮಿಪದ ಸರಕಾರಿ ಆಸ್ಪತ್ರೆಯಲ್ಲಿ ಪರೀಕ್ಷಿಸಿಕೊಂಡು ಸೂಕ್ತ ಚಿಕಿತ್ಸೆ ಪಡೆಯಬೇಕು, ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ ಎಂದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಹ್ಮದ ಮಹೆಬೂಬ ಮಾತನಾಡಿ, ಜಿಲ್ಲೆಯಲ್ಲಿ 2026ನೇ ವರ್ಷದಲ್ಲಿ ಇಲ್ಲಿಯವರೆಗೆ 01 ಮಲೇರಿಯಾ ಪಿ ವಿ ಪ್ರಕರಣ ವಲಸಿಗ–ರಿಗೆ ಪತ್ತೆಯಾಗಿದ್ದು, ತೀವ್ರಚಿಕಿತ್ಸೆ ನೀಡುವುದರ ಮೂಲ ಗುಣಪಡಿಸಲಾಗಿದೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR